ಸಂಪುಟ: 11 ಸಂಚಿಕೆ: 174 ಪುಟ: 4+2 ಬೆಲೆ : 3.00 ಶುಕ್ರವಾರ, ಆಗಸ್ಟ್ 14, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 174 Pages : 4+2 Rate : 3.00 Friday, August 14, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

### 11 ಸಾವಿರ ಮನೆಗಳ ಸಂಪರ್ಕ ಗುರಿ | ಆರೋಗ್ಯ, ಆಡಳಿತಾತ್ಮಕ ಸೇವೆ ಒಂದೇ ವೇದಿಕೆಯಲ್ಲಿ: ಪ್ರಭು ಬುರುಬುರೆ

# ನಿಮ್ಮ ಸೇವೆಗೆ ಅವಕಾಶ ಕೊಡಿ ಸಮಾವೇಶ ನಾಳೆ

**ವಿಜಯಸಾಕ್ಷಿ ಸುದ್ದಿ, ಗದಗ**

ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಅಗತ್ಯ ಸೇವೆಗಳನ್ನು ತಲುಪಿಸುವ ಉದ್ದೇಶದಿಂದ ಎಚ್.ಕೆ. ಪಾಟೀಲ ಸೇವಾ ತಂಡದ ವತಿಯಿಂದ ಆ.15ರಂದು ಸಂಜೆ 5 ಗಂಟೆಗೆ ಕಾಟನ್ ಸೇಲ್ಸ್ ಸೊಸೈಟಿ ಆವರಣದಲ್ಲಿ ನಿಮ್ಮ ಸೇವೆಗೆ ಅವಕಾಶ ಕೊಡಿ' ಸಮಾವೇಶ ಆಯೋಜಿಸಲಾಗಿದೆ ಎಂದು ಸೇವಾ ತಂಡದ ಮುಖ್ಯಸ್ಥ ಪ್ರಭು ಬುರುಬುರೆ ತಿಳಿಸಿದರು.



ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾರ್ವಜನಿಕರಿಗೆ ಅಗತ್ಯವಿರುವ ಆರೋಗ್ಯ, ಸಾಮಾಜಿಕ ಹಾಗೂ ಆಡಳಿತಾತ್ಮಕ ಸೇವೆಗಳನ್ನು ಒಂದೇ ವೇದಿಕೆಯಡಿ ತಲುಪಿಸಲು ತಂಡ ಕಾರ್ಯನಿರ್ವಹಿಸುತ್ತಿದೆ. ಕೈಗೊಂಡ ಪ್ರತಿಯೊಂದು ಸೇವಾ ಕಾರ್ಯದ ವಿವರಗಳನ್ನು ದಾಖಲಿಸುವ ಮೂಲಕ ಪಾರದರ್ಶಕತೆಗೆ ಆದ್ಯತೆ ನೀಡಲಾಗಿದೆ. ಜನರ ಸಮಸ್ಯೆಗಳನ್ನು ಗುರುತಿಸಿ ಸಂಬಂಧಿಸಿದ ಇಲಾಖೆಗಳ ಗಮನಕ್ಕೆ ತಂದು ಪರಿಹಾರ ಕಲ್ಪಿಸುವ ಜವಾಬ್ದಾರಿಯನ್ನು ತಂಡ ವಹಿಸಿಕೊಂಡಿದೆ ಎಂದರು.

ಕಿಡ್ನಿ ಸಮಸ್ಯೆ, ಮೊಣಕಾಲು ನೋವು ಸೇರಿದಂತೆ ವಿವಿಧ ಆರೋಗ್ಯ ಸಮಸ್ಯೆಗಳಿಗೆ ನೆರವು ನೀಡಲಾಗುತ್ತಿದ್ದು, ಅಂಗಾಂಗ ದಾನ, ನೇತ್ರದಾನ, ರಕ್ತದಾನ, ಮಹಿಳಾಮಕ್ಕಳ ಆರೋಗ್ಯ, ವಿಕಲಚೇತನರು ಹಾಗೂ ಹಿರಿಯ ನಾಗರಿಕರಿಗೆ ಸಂಬಂಧಿಸಿದ ಸೇವೆಗಳಿಗೂ ಒತ್ತು ನೀಡಲಾಗಿದೆ ಎಂದರು.

**ವೆಬ್, ಆ್ಯಪ್ ಮೂಲಕ ಸಮಸ್ಯೆಗಳಿಗೆ ಪರಿಹಾರ**

ಯುವ ಕಾಂಗ್ರೆಸ್ ಘಟಕದ ಜಿಲ್ಲಾ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಮಾತನಾಡಿ, ಹಿಂದೆ ಅಗತ್ಯವಿದ್ದಾಗ ಮಾತ್ರ ಜನರು ಸೇವಾ ತಂಡವನ್ನು ಸಂಪರ್ಕಿಸುತ್ತಿದ್ದರು. ಇದೀಗ ಪ್ರತಿ ಮನೆಗೂ ಸೇವೆ ತಲುಪಿಸುವ ಉದ್ದೇಶ ಹೊಂದಲಾಗಿದೆ. ವೆಬ್ ಹಾಗೂ ಆ್ಯಪ್ ಮೂಲಕ ವಿವಿಧ ಯೋಜನೆಗಳ ಮಾಹಿತಿ ಪಡೆದು, ಸಾರ್ವಜನಿಕರ ಸಮಸ್ಯೆಗಳನ್ನು ದಾಖಲಿಸಿ ಪರಿಹರಿಸಲು ಸೇವಾ ತಂಡದ ವಾರ್ ರೂಮ್ ಕಾರ್ಯನಿರ್ವಹಿಸುತ್ತಿದೆ ಎಂದರು.

**200ಕ್ಕೂ ಹೆಚ್ಚು ಶಸ್ತ್ರಚಿಕಿತ್ಸೆ**

ಡಾ. ಎಸ್.ಆರ್. ನಾಗನೂರು ಮಾತನಾಡಿ, ಕಡಿಮೆ ಅವಧಿಯಲ್ಲಿ 100ಕ್ಕೂ ಹೆಚ್ಚು ಜಾಯಿಂಟ್ ರಿಪ್ಲೇಸ್‌ಮೆಂಟ್ ಶಸ್ತ್ರಚಿಕಿತ್ಸೆ ಸೇರಿದಂತೆ 200ಕ್ಕೂ ಹೆಚ್ಚು ಶಸ್ತ್ರಚಿಕಿತ್ಸೆ ನಡೆಸಲಾಗಿದೆ. ಹೆಣ್ಣು ಮಗು ಜನಿಸಿದಾಗ ಯಾವುದೇ ಬಿಲ್ ವಿಧಿಸದೆ ನೆರವು ನೀಡುವಂತಹ ಸಾಮಾಜಿಕ ಕಾಳಜಿಯ ಸೇವೆಗಳನ್ನೂ ಕೈಗೊಳ್ಳಲಾಗುತ್ತಿದೆ. ಅಂಗಾಂಗ ದಾನ ಕ್ಷೇತ್ರದಲ್ಲೂ ರಾಜ್ಯದಲ್ಲಿ ಗಮನಾರ್ಹ ಸೇವೆ ಸಲ್ಲಿಸಿ ಮೂರನೇ ಸ್ಥಾನ ತಲುಪಿದ್ದೇವೆ ಎಂದರು. ಆ.15ರಂದು ನಡೆಯುವ ಸಮಾವೇಶದಲ್ಲಿ ಇದುವರೆಗೆ ಕೈಗೊಂಡ ಸೇವಾ ಕಾರ್ಯಗಳು, ಮುಂದಿನ ಯೋಜನೆಗಳು ಹಾಗೂ ಸಾರ್ವಜನಿಕರ ಸಹಭಾಗಿತ್ವದ ಕುರಿತು ಮಾಹಿತಿ ನೀಡಲಾಗುವುದು. ಅನಿಲ್ ಕುಮಾರ್ ಲಾಲ್ ಬಹದ್ದೂರ್ ಶಾಸ್ತ್ರಿ ಸೇರಿದಂತೆ ಗಣ್ಯರು ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಬಿ.ಬಿ. ಅಸೂಟಿ, ಎಮ್.ಸಿ ಶೇಖ, ಶಿವಣ್ಣ ಬಳ್ಳಾರಿ, ಸಿದ್ದು ಪಾಟೀಲ, ಅಶೋಕ ಮಂದಾಲಿ, ಅನ್ವರ್ ನದಾಫ್ ಸೇರಿದಂತೆ ಸೇವಾ ತಂಡದ ಪದಾಧಿಕಾರಿಗಳು ಉಪಸ್ಥಿತರಿದ್ದರು.

> **ಪ್ರತಿ ಮನೆಗೂ ಸೇವಾ ತಂಡದ ಸೇವೆ ತಲುಪಬೇಕು ಎಂಬ ಉದ್ದೇಶದಿಂದ ಅಭಿಯಾನ ಆರಂಭಿಸಲಾಗಿದೆ. ವಾರ್ಡ್‌ವಾರು ಸುಮಾರು 11 ಸಾವಿರ ಮನೆಗಳನ್ನು ಸಂಪರ್ಕಿಸುವ ಗುರಿ ಹೊಂದಿದ್ದು, ಸ್ವಯಂಪ್ರೇರಿತವಾಗಿ ಸೇವೆ ಸಲ್ಲಿಸಲು ಬರುವವರಿಗೂ ಅವಕಾಶ ನೀಡಲಾಗುವುದು. ಮುಂದಿನ ದಿನಗಳಲ್ಲಿ ದಿನದ 24 ಗಂಟೆಯೂ ಸೇವೆ ಒದಗಿಸುವ ವ್ಯವಸ್ಥೆ ರೂಪಿಸುವ ಉದ್ದೇಶವಿದೆ.**
>
> **- ಪ್ರಭು ಬುರುಬುರೆ,** ಸೇವಾ ತಂಡದ ಮುಖ್ಯಸ್ಥ

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

## ಇಂದು ಗದಗಕ್ಕೆ ಸಚಿವ ರಾಯರಡ್ಡಿ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದ ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರಡ್ಡಿ ಅವರು ಆ.14ರಂದು ಗದಗ ಜಿಲ್ಲೆಗೆ ಪ್ರವಾಸ ಕೈಗೊಳ್ಳಲಿದ್ದಾರೆ.

ಆ.14ರಂದು ಮಧ್ಯಾಹ್ನ 3 ಗಂಟೆಗೆ ಬೆಂಗಳೂರಿನಿಂದ ರಸ್ತೆ ಮಾರ್ಗವಾಗಿ ಹೊರಡಲಿರುವ ಸಚಿವರು ರಾತ್ರಿ 9 ಗಂಟೆಗೆ ಗದಗಿಗೆ ಆಗಮಿಸಿ ವಾಸ್ತವ್ಯ ಮಾಡಲಿದ್ದಾರೆ. ಆ.15ರಂದು ಬೆಳಿಗ್ಗೆ 9 ಗಂಟೆಗೆ ಗದಗದಲ್ಲಿ ನಡೆಯುವ ಸ್ವಾತಂತ್ರ್ಯೋತ್ಸವ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಬಳಿಕ ಮಧ್ಯಾಹ್ನ 3 ಗಂಟೆಗೆ ಗದಗದಿಂದ ಕುಕನೂರಿಗೆ ಪ್ರಯಾಣಿಸಲಿದ್ದಾರೆ ಎಂದು ಸಚಿವರ ಪ್ರವಾಸ ಕಾರ್ಯಕ್ರಮದ ಪ್ರಕಟಣೆ ತಿಳಿಸಿದೆ.

**ಹಾರಸನ್ಮಾನ ಬೇಡ:** ಪ್ರವಾಸದ ಸಂದರ್ಭದಲ್ಲಿ ಸರ್ಕಾರಿ ಕಚೇರಿಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಯಾವುದೇ ರೀತಿಯ ಹಾರ ಹಾಕುವುದು, ಸನ್ಮಾನಿಸುವುದು ಸೇರಿದಂತೆ ಇತರೆ ಗೌರವ ಕಾರ್ಯಕ್ರಮಗಳನ್ನು ನಡೆಸಬಾರದು ಎಂದು ಪ್ರಕಟಣೆಯಲ್ಲಿ ಮನವಿ ಮಾಡಲಾಗಿದೆ.

## ಅಂಚೆ ಕಚೇರಿಗಳಲ್ಲಿ ಬೆಳಿಗ್ಗೆ 9ರಿಂದಲೇ ವ್ಯವಹಾರ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಧಾರವಾಡ ಅಂಚೆ ವಿಭಾಗದ ವ್ಯಾಪ್ತಿಯಲ್ಲಿರುವ ಧಾರವಾಡ ಹಾಗೂ ಹುಬ್ಬಳ್ಳಿ ಮುಖ್ಯ ಅಂಚೆ ಕಚೇರಿಗಳು ಸೇರಿದಂತೆ 55 ಇಲಾಖಾ ಅಂಚೆ ಕಚೇರಿಗಳಲ್ಲಿ ಬೆಳಿಗ್ಗೆ 9 ಗಂಟೆಯಿಂದ ಏಕರೂಪದ ವ್ಯವಹಾರ ಸಮಯ ಜಾರಿಗೆ ತರಲಾಗಿದೆ. ಇದರಿಂದ ಸಾರ್ವಜನಿಕರು ಬೆಳಿಗ್ಗೆ 9 ಗಂಟೆಯಿಂದಲೇ ಉಳಿತಾಯ ಬ್ಯಾಂಕ್ ವ್ಯವಹಾರ, ಸ್ಪೀಡ್ ಪೋಸ್ಟ್, ಪಾರ್ಸೆಲ್ ಬುಕ್ಕಿಂಗ್, ಇ-ಪಾವತಿ, ಅಂಚೆ ಜೀವ ವಿಮೆ ಸೇರಿದಂತೆ ವಿವಿಧ ಅಂಚೆ ಸೇವೆಗಳನ್ನು ಪಡೆಯಬಹುದಾಗಿದೆ. ಧಾರವಾಡ ಹಾಗೂ ಹುಬ್ಬಳ್ಳಿ ಮುಖ್ಯ ಅಂಚೆ ಕಚೇರಿಗಳಲ್ಲಿ ಪ್ರತಿದಿನ ರಾತ್ರಿ 8ರವರೆಗೆ ಸ್ಪೀಡ್ ಪೋಸ್ಟ್, ಪಾರ್ಸೆಲ್ ಸೇರಿದಂತೆ ಅಂಚೆ ಲೇಖನಗಳ ಬುಕ್ಕಿಂಗ್ ಸೌಲಭ್ಯವಿದೆ. ಧಾರವಾಡ ರೈಲ್ವೆ ನಿಲ್ದಾಣ ಉಪ ಅಂಚೆ ಕಚೇರಿಯಲ್ಲಿ ರಾತ್ರಿ 8.30ರವರೆಗೆ ಸೇವೆ ಲಭ್ಯವಿರಲಿದೆ.

# ಯುವಜನರ ಉದ್ಯೋಗ ಸೇತುವೆಗೆ ಜಾಬ್ ಬ್ರಿಡ್ಜ್ ನೋಡ್




**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕದ ಯುವಜನರ ಸಬಲೀಕರಣ ಹಾಗೂ ಉದ್ಯೋಗಾವಕಾಶಗಳಿಗೆ ಸಂಪರ್ಕ ಕಲ್ಪಿಸುವ ಉದ್ದೇಶದಿಂದ ಸೋಲಿಡಾರಿಟಿ ಯೂತ್ ಮೂವ್‌ಮೆಂಟ್ ವತಿಯಿಂದ ಜಾಬ್ ಬ್ರಿಡ್ಜ್ ನೋಡ್' ವೆಬ್ ಪೋರ್ಟಲ್‌ಗೆ ಆ.1ರಿಂದ 15ರವರೆಗೆ ಉದ್ಘಾಟನಾ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಮೊಹಮ್ಮದ್ ಯೂಸುಫ್ ಮುಲ್ಲಾ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಯುವ ವಿದ್ಯಾವಂತ ನಿರುದ್ಯೋಗಿಗಳನ್ನು ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಗಳು ಹಾಗೂ ಸೂಕ್ತ ಮಾರ್ಗದರ್ಶನದೊಂದಿಗೆ ಸಂಪರ್ಕಿಸುವುದು ಉಪಕ್ರಮದ ಪ್ರಮುಖ ಉದ್ದೇಶವಾಗಿದೆ ಎಂದರು.

ಯುವಜನರಿಗೆ ಸೂಕ್ತ ಉದ್ಯೋಗಾವಕಾಶಗಳ ಮಾಹಿತಿ, ಅಗತ್ಯ ಕೌಶಲ್ಯಾಭಿವೃದ್ಧಿ, ತರಬೇತಿ ಹಾಗೂ ಮಾರ್ಗದರ್ಶನವನ್ನು ಒಂದೇ ವೇದಿಕೆಯಲ್ಲಿ ಒದಗಿಸುವ ಪ್ರಯತ್ನವನ್ನು ಜಾಬ್ ಬ್ರಿಡ್ಜ್ ನೋಡ್' ಮೂಲಕ ಮಾಡಲಾಗಿದೆ. ಉದ್ಯೋಗದಾತರು ಮತ್ತು ಉದ್ಯೋಗಾಕಾಂಕ್ಷಿಗಳ ನಡುವೆ ಸಂಪರ್ಕ ಕಲ್ಪಿಸುವ ವೇದಿಕೆಯಾಗಿ ಇದು ಕಾರ್ಯನಿರ್ವಹಿಸಲಿದೆ ಎಂದು ಹೇಳಿದರು.

ಪೋರ್ಟಲ್‌ನಲ್ಲಿ ವಿವಿಧ ಉದ್ಯೋಗಾವಕಾಶಗಳು, ಕೌಶಲ್ಯಾಭಿವೃದ್ಧಿ, ತರಬೇತಿ ಕಾರ್ಯಕ್ರಮಗಳು ಹಾಗೂ ಉದ್ಯೋಗಕ್ಕೆ ಸಂಬಂಧಿಸಿದ ಮಾರ್ಗದರ್ಶನದ ಮಾಹಿತಿಯನ್ನು ಪಡೆಯಬಹುದಾಗಿದೆ. ಸೋಲಿಡಾರಿಟಿ ಯೂತ್ ಮೂವ್‌ಮೆಂಟ್ ರಾಜ್ಯ ಘಟಕದ ನೇತೃತ್ವದಲ್ಲಿ ಕಾರ್ಯಕ್ರಮ ರೂಪಿಸಲಾಗಿದ್ದು, 2016ರಿಂದ ಕರ್ನಾಟಕದ ವಿವಿಧ ಜಿಲ್ಲೆಗಳಲ್ಲಿ ಯುವಜನರ ಸಬಲೀಕರಣಕ್ಕಾಗಿ ಹಲವು ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಸಾಮಾಜಿಕ ಕಾರ್ಯಕರ್ತರು ಹಾಗೂ ಯುವಜನರಿಗೆ ಉದ್ಯೋಗ ಸಂಬಂಧಿತ ಮಾಹಿತಿ ತಲುಪಿಸುವ ಉದ್ದೇಶದಿಂದ ಈ ಹೊಸ ಉಪಕ್ರಮ ಕೈಗೊಳ್ಳಲಾಗಿದೆ ಎಂದರು.

ಉದ್ಯೋಗಾಕಾಂಕ್ಷಿಗಳು ಹಾಗೂ ಉದ್ಯೋಗದಾತರು www.jobbridgenode.com ಮೂಲಕ ಸೇವೆ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ 6366234200 ಸಂಪರ್ಕಿಸಬಹುದು. jobbridgesolidaritykarnataka.com ಇ-ಮೇಲ್ ಮೂಲಕವೂ ಮಾಹಿತಿ ಪಡೆಯಬಹುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ರಿಯಾಜ್ ಅಹ್ಮದ್ ಶೇಖ್, ಮೆಹಬೂಬ್ ರೋಣದ, ಜಾವೇದ್ ಉಮಚಗಿ, ಅಕ್ಬರ್ ಅತ್ತಾರ, ಜಹೀರ್ ಅಹ್ಮದ್, ತಾಹೀರ್ ಡಂಬಳ, ಖಾಸೀನ್ ದರ್ಗದ್, ಮುನ್ನಾ ಕಲ್ಮನಿ, ಇಮಾಮ್ ಮೊರಬದ, ಸಾಧಿಕ್ ಧಾರವಾಡ ಉಪಸ್ಥಿತರಿದ್ದರು.

### ಮಳೆಗಾಲದ ವಿದ್ಯುತ್ ವ್ಯತ್ಯಯಕ್ಕೆ ತ್ವರಿತ ಪರಿಹಾರ | ಯುವನಿಧಿ ಭತ್ಯೆ, ಬಸ್ ಪಾಸ್, ಸ್ವಚ್ಛತೆಗೆ ಆದ್ಯತೆ: ಎಸ್.ಆರ್. ಪಾಟೀಲ

# ಗ್ಯಾರಂಟಿ ಯೋಜನೆಗಳ ಸೌಲಭ್ಯ ಸಕಾಲಕ್ಕೆ ತಲುಪಲಿ




**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಮಳೆಗಾಲದಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ಉಂಟಾಗುತ್ತಿರುವ ವ್ಯತ್ಯಯದಿಂದ ಸಾರ್ವಜನಿಕರಿಗೆ ತೊಂದರೆಯಾಗದಂತೆ ಅಧಿಕಾರಿಗಳು ತ್ವರಿತವಾಗಿ ಕ್ರಮ ಕೈಗೊಳ್ಳಬೇಕು. ಗ್ಯಾರಂಟಿ ಯೋಜನೆಗಳ ಸೌಲಭ್ಯ ಅರ್ಹ ಫಲಾನುಭವಿಗಳಿಗೆ ಸಕಾಲದಲ್ಲಿ ತಲುಪುವಂತೆ ಅನುಷ್ಠಾನವನ್ನು ಮತ್ತಷ್ಟು ಚುರುಕುಗೊಳಿಸಬೇಕು ಎಂದು ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್. ಪಾಟೀಲ ಸೂಚಿಸಿದರು.

ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ನಡೆದ ಗ್ಯಾರಂಟಿ ಯೋಜನೆಗಳ ಜಿಲ್ಲಾಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅರ್ಹ ಯುವಕರು ಯುವನಿಧಿಗೆ ಅರ್ಜಿ ಸಲ್ಲಿಸಿದ ಬಳಿಕ ಯಾವುದೇ ಕಾರಣಕ್ಕೂ ಭತ್ಯೆ ಪಡೆಯಲು ವಿಳಂಬವಾಗಬಾರದು. ಪ್ರತಿಯೊಬ್ಬ ಫಲಾನುಭವಿಗೂ ಸಕಾಲದಲ್ಲಿ ಸೌಲಭ್ಯ ತಲುಪುವಂತೆ ಅಧಿಕಾರಿಗಳು ಗಮನಹರಿಸಬೇಕು. ಗ್ರಾಮೀಣ ಭಾಗದಲ್ಲಿ ಮಳೆಯಿಂದ ಉಂಟಾಗುವ ವಿದ್ಯುತ್ ಸಮಸ್ಯೆಗಳನ್ನು ತ್ವರಿತವಾಗಿ ಪರಿಹರಿಸಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಎಸ್.ಆರ್. ಪಾಟೀಲ ಹೇಳಿದರು.

ಮಕ್ಕಳ ಬಸ್ ಪಾಸ್‌ಗಳು ಯಾವುದೇ ರೀತಿಯಲ್ಲೂ ಬಾಕಿ ಉಳಿಯದಂತೆ ಕ್ರಮ ಕೈಗೊಳ್ಳಬೇಕು. ಧಾರವಾಡ ಜಿಲ್ಲೆ ಹಾಗೂ ತಾಲೂಕು ವ್ಯಾಪ್ತಿಯ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣಗಳ ಶೌಚಾಲಯಗಳ ಸ್ವಚ್ಛತೆಗೆ ಮೊದಲ ಆದ್ಯತೆ ನೀಡಬೇಕು. ಸಾರ್ವಜನಿಕರು ಹಾಗೂ ಪ್ರಯಾಣಿಕರಿಗೆ ಸ್ವಚ್ಛ ಮತ್ತು ಉತ್ತಮ ಪರಿಸರ ದೊರೆಯುವಂತೆ ಅಧಿಕಾರಿಗಳು ಕ್ರಮ ವಹಿಸಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಸುಧೀರ ಎಸ್. ಬೋಳಾರ, ರತ್ನಾ ತೇಗೂರಮಠ, ರೇಹಾನ್ ರಝಾ ಐನಾಪೂರಿ ಹಾಗೂ ಸದಸ್ಯರಾದ ಅರವಿಂದ ಏಗನಗೌಡರ, ಬಸಪ್ಪ ಮಹಾಬಲೇಶ್ವರ ಬಾವಕಾರ ಅವರು ಮಾತನಾಡಿದರು.

ಜಿಪಂ ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ ಸ್ವಾಗತಿಸಿ, ವಂದಿಸಿದರು.

ಸಭೆಯಲ್ಲಿ ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಪ್ರಾಧಿಕಾರದ ಸದಸ್ಯರಾದ ವರ್ಧಮಾನ ಹಿರೇಗೌಡರ, ಶಿವಾನಂದ ಭೂಮಣ್ಣನವರ, ನೆಹರು ಪಾಟೀಲ ಸೇರಿದಂತೆ ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

## ಯುವನಿಧಿಗೆ 12,792 ಅರ್ಜಿ

1. ಜಿಲ್ಲೆಯಲ್ಲಿ ಯುವನಿಧಿ ಯೋಜನೆಯಡಿ ಇದುವರೆಗೆ 12,792 ಅರ್ಜಿಗಳು ಸ್ವೀಕೃತವಾಗಿದ್ದು, 11,553 ಫಲಾನುಭವಿಗಳಿಗೆ ಡಿಬಿಟಿ ಮೂಲಕ ₹34,51,19,500 ಸಹಾಯಧನ ಜಮೆಯಾಗಿದೆ.
2. ಶಕ್ತಿ ಯೋಜನೆ ಆರಂಭವಾದಾಗಿನಿಂದ ಜಿಲ್ಲೆಯಲ್ಲಿ 42,46,65,439 ಮಹಿಳೆಯರು ಉಚಿತವಾಗಿ ಪ್ರಯಾಣಿಸಿದ್ದು, ಸರ್ಕಾರದಿಂದ ಸುಮಾರು ₹936.73 ಕೋಟಿ ಬಿಡುಗಡೆಯಾಗಿದೆ.
3. ಗೃಹ ಜ್ಯೋತಿ ಯೋಜನೆಯಡಿ 5,67,985 ಫಲಾನುಭವಿಗಳಿದ್ದು, ಸರ್ಕಾರದಿಂದ ಒಟ್ಟು ₹80371.92 ಲಕ್ಷ ಬಿಡುಗಡೆಯಾಗಿದೆ. ಗೃಹಲಕ್ಷ್ಮಿ ಯೋಜನೆಯಡಿ 3,77,361 ಫಲಾನುಭವಿಗಳಿಗೆ ₹2,270,27,90,000 ಹಣ ಬಿಡುಗಡೆಯಾಗಿದೆ. ಜುಲೈ ತಿಂಗಳಲ್ಲಿ ಜಿಲ್ಲೆಯಲ್ಲಿ 27 ಫಲಾನುಭವಿಗಳು ಮೃತಪಟ್ಟಿರುವುದಾಗಿ ಸಭೆಯಲ್ಲಿ ಮಾಹಿತಿ ನೀಡಲಾಯಿತು.
4. ಅನ್ನಭಾಗ್ಯ ಯೋಜನೆಯಡಿ 3,75,996 ಫಲಾನುಭವಿಗಳಿದ್ದು, ಒಟ್ಟು ₹3,62,516 ಲಕ್ಷ ಹಣ ಬಿಡುಗಡೆಯಾಗಿದೆ.

### ಯುವ ಕಾಂಗ್ರೆಸ್ ಕಾರ್ಯಕಾರಿಣಿ ಸಭೆಯಲ್ಲಿ ಪಕ್ಷ ಸಂಘಟನೆಗೆ ಚುರುಕು ನೀಡುವಂತೆ ಕೃಷ್ಣಗೌಡ ಪಾಟೀಲ ಕರೆ

# ಬೂತ್ ಮಟ್ಟದಲ್ಲಿ ಸಂಘಟನೆ ಬಲಪಡಿಸಿ

**ವಿಜಯಸಾಕ್ಷಿ ಸುದ್ದಿ, ಗದಗ**

ಮುಂಬರುವ ದಿನಗಳಲ್ಲಿ ಪಕ್ಷದ ಸಂಘಟನೆ ಮತ್ತಷ್ಟು ಬಲಿಷ್ಠವಾಗಬೇಕಾದರೆ ಬೂತ್ ಮಟ್ಟದಿಂದಲೇ ಕಾರ್ಯಕರ್ತರನ್ನು ಸಜ್ಜುಗೊಳಿಸಿ ಸಂಘಟನೆಗೆ ಚುರುಕು ನೀಡಬೇಕು ಎಂದು ಯುವ ಕಾಂಗ್ರೆಸ್ ಜಿಲ್ಲಾ ಘಟಕದ ಅಧ್ಯಕ್ಷ ಕೃಷ್ಣಗೌಡ ಎಚ್. ಪಾಟೀಲ ಕರೆ ನೀಡಿದರು.




ಅವರ ನೇತೃತ್ವದಲ್ಲಿ ನಡೆದ ಜಿಲ್ಲಾ ಯುವ ಕಾಂಗ್ರೆಸ್ ಕಾರ್ಯಕಾರಿಣಿ ಸಭೆಯಲ್ಲಿ ಮಾತನಾಡಿದ ಅವರು, ಪ್ರತಿಯೊಂದು ಬೂತ್‌ನಲ್ಲೂ ಯುವ ಕಾರ್ಯಕರ್ತರನ್ನು ಸಕ್ರಿಯಗೊಳಿಸಿ, ಪಕ್ಷದ ಸಿದ್ಧಾಂತ ಹಾಗೂ ಸರ್ಕಾರದ ಜನಪರ ಯೋಜನೆಗಳನ್ನು ಜನರಿಗೆ ತಲುಪಿಸುವ ಕೆಲಸ ಮಾಡಬೇಕು ಎಂದರು.

ಸಭೆಯಲ್ಲಿ ರಾಜ್ಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಗಳಾದ ಅಕ್ಷಯ್ ಪಾಟೀಲ, ಅಕ್ಷತಾ ರವಿಕುಮಾರ್, ಸೂರಜ್ ಅವಾಟಿ, ಉದಯ್ ವೀರನಗೌಡ, ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ್ ಮಂದಾಲಿ, ಜಿಲ್ಲಾ ಯುವ ಕಾಂಗ್ರೆಸ್ ಉಪಾಧ್ಯಕ್ಷರಾದ ರಾಘವೇಂದ್ರ ದೊಡ್ಡಮನಿ, ವೀಣಾ ಹಿರೇಮಠ, ಶರಣಪ್ಪ ಗವಾರಿ, ಅಹಮದ್ ಖಾಜಿ ಹಾಗೂ ಪ್ರಧಾನ ಕಾರ್ಯದರ್ಶಿಗಳಾದ ವಿಜಯ್ ಚಲವಾದಿ, ರವಿ ಮೆಟಗುಡ್ಡ, ಹಸನಸಾಬ ಜಂಗ್ಲಿ, ಎಚ್.ಡಿ. ನದಾಫ, ಉಮರ್ ಫಾರೂಕ್ ಬಾರಿಗಿಡದ ಉಪಸ್ಥಿತರಿದ್ದರು.

> **ಪಕ್ಷದ ನಿಜವಾದ ಶಕ್ತಿ ಬೂತ್ ಮಟ್ಟದ ಕಾರ್ಯಕರ್ತರು. ಪ್ರತಿಯೊಂದು ಬೂತ್‌ನಲ್ಲೂ ಸಂಘಟನೆ ಬಲಪಡಿಸಿ, ಯುವಕರನ್ನು ಸಕ್ರಿಯವಾಗಿ ತೊಡಗಿಸಿಕೊಳ್ಳುವ ಮೂಲಕ ಪಕ್ಷವನ್ನು ಮತ್ತಷ್ಟು ಸದೃಢಗೊಳಿಸಬೇಕು.**
>
> **- ಕೃಷ್ಣಗೌಡ ಎಚ್. ಪಾಟೀಲ**

ಗದಗ ವಿಧಾನಸಭಾ ಕ್ಷೇತ್ರದ ಅಧ್ಯಕ್ಷ ಮುತ್ತು ಮುಳವಾಡ, ನರಗುಂದ ವಿಧಾನಸಭಾ ಕ್ಷೇತ್ರದ ಅಧ್ಯಕ್ಷ ವೀರೇಶ್ ಚುಳುಕಿ, ಗದಗ-ಬೆಟಗೇರಿ ಬ್ಲಾಕ್ ಯುವ ಕಾಂಗ್ರೆಸ್ ಅಧ್ಯಕ್ಷ ಅನ್ವರಭಾಷಾ ಕೆ. ನದಾಫ, ಮುಳಗುಂದ ಬ್ಲಾಕ್ ಅಧ್ಯಕ್ಷ ಅಜ್ಜಪ್ಪ ಹುಗ್ಗನ್ನವರ, ನರಗುಂದ ಬ್ಲಾಕ್ ಅಧ್ಯಕ್ಷ ಸುನೀಲ ಕಳಸನ್ನವರ, ಶಿರಹಟ್ಟಿ ಬ್ಲಾಕ್ ಅಧ್ಯಕ್ಷ ಸಂತೋಷ್ ರೆಡ್ಡಿ, ಹೊಳೆಆಲೂರ ಬ್ಲಾಕ್ ಅಧ್ಯಕ್ಷ ನಿಂಗಪ್ಪ ಗುಂಜಾಳ, ರೋಣ ಯುವ ಕಾಂಗ್ರೆಸ್ ಅಧ್ಯಕ್ಷ ಆನಂದ ರಾಥೋಡ ಸೇರಿದಂತೆ ವಿವಿಧ ಘಟಕಗಳ ಪದಾಧಿಕಾರಿಗಳು ಭಾಗವಹಿಸಿದ್ದರು.

ಶಹರ ಸೇವಾದಳ ಅಧ್ಯಕ್ಷ ಮೊಹಮ್ಮದ್ ಬೆಟಗೇರಿ ಹಾಗೂ ಶ್ರುತಿ ಕಮತರ, ಚಂದ್ರಶೇಖರ ಕಡಕೋಳ, ಅಭಿಷಯ ಅಬ್ಬಿಸ್, ಕಿರಣ್ ಮಾಕಾಪುರ, ಶಾರುಖ್ ಹುಯಿಲ್‌ಗೋಳ, ಹಸನ್ ಓಲೇಕಾರ್, ರವಿ ಹಾದಿಮನಿ, ನಾವೀದು ಸಿದ್ದಾಪುರ, ಮಹೇಶ್ ಹೊಸಳ್ಳಿ, ರಝಾ ಡಂಬಳ, ಮಹೇಶ ದೊಡ್ಡಮನಿ, ಚನ್ನು ಬ್ಯಾಹಟ್ಟಿ, ರಾಜೇಸಾಬ ಪಿಂಜಾರ, ಸೋಮು ನಾಗರಾಜ, ಗೋಪಿ ರಾಯನಗೌಡ್ರ, ಮಹೇಶ ಕಳಸನವರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಇಂದು 100 ಮೀಟರ್ ತ್ರಿವರ್ಣ ಯಾತ್ರೆ

**ವಿಜಯಸಾಕ್ಷಿ ಸುದ್ದಿ, ಗದಗ**

ಸ್ವಾತಂತ್ರ್ಯೋತ್ಸವದ ಅಂಗವಾಗಿ ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಹಾಗೂ ಜಿಲ್ಲಾ ಬಟ್ಟೆ ವ್ಯಾಪಾರಿಗಳ ಸಂಘದ ಸಹಯೋಗದಲ್ಲಿ ಆ.14ರಂದು ಬೆಳಿಗ್ಗೆ 10 ಗಂಟೆಗೆ 100 ಮೀಟರ್ ಉದ್ದದ ತ್ರಿವರ್ಣ ಯಾತ್ರೆ ನಡೆಯಲಿದೆ. ಬಸವೇಶ್ವರ ಸರ್ಕಲ್‌ನಿಂದ ಆರಂಭವಾಗುವ ಯಾತ್ರೆಗೆ ಡಿವೈಎಸ್‌ಪಿ ಮುರ್ತುಜಾ ಖಾದ್ರಿ ಚಾಲನೆ ನೀಡಲಿದ್ದು, ನಾಮಜೋಶಿ ರಸ್ತೆ, ಹುಯಿಲಗೋಳ ನಾರಾಯಣರಾವ್ ವೃತ್ತ, ಮಹೇಂದ್ರಕರ ವೃತ್ತ ಹಾಗೂ ಗಾಂಧಿ ವೃತ್ತದ ಮೂಲಕ ಸಾಗಿ ಲಯನ್ಸ್ ಭವನ ತಲುಪಲಿದೆ. ನೂರಾರು ಮಂದಿ ಬೃಹತ್ ತ್ರಿವರ್ಣ ಧ್ವಜ ಹೊತ್ತು ಏಕತೆ ಹಾಗೂ ದೇಶಭಕ್ತಿಯ ಸಂದೇಶ ಸಾರಲಿದ್ದಾರೆ.ದೇಶಪ್ರೇಮಿಗಳು ಹಾಗೂ ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಲಯನ್ಸ್ ಕ್ಲಬ್ ಅಧ್ಯಕ್ಷ ಪ್ರವೀಣ ವಾರಕರ ಹಾಗೂ ಕಾರ್ಯದರ್ಶಿ ಲಿಂಗರಾಜ ತೋಟದ ಮನವಿ ಮಾಡಿದ್ದಾರೆ.

## ಆ.18ರಂದು ನೇರ ಸಂದರ್ಶನ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಆ.18ರಂದು ಬೆಳಗ್ಗೆ 10 ಗಂಟೆಗೆ ನಗರದ ಕಳಸಾಪುರ ರಸ್ತೆ, 7ನೇ ಅಡ್ಡರಸ್ತೆ, ಶಿವಾನಂದ ನಗರದಲ್ಲಿ ಭಾರತ್ ಫೈನಾನ್ಷಿಯಲ್ ಇನ್‌ಕ್ಲೂಷನ್ ಲಿಮಿಟೆಡ್ ಕಂಪನಿಯ ನೇರ ಸಂದರ್ಶನ ಆಯೋಜಿಸಲಾಗಿದೆ.ಅಭ್ಯರ್ಥಿಗಳು ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿ, ಎರಡು ರೆಸ್ಯೂಮೆ/ಬಯೋಡಾಟಾ ಪ್ರತಿಗಳು, ಆಧಾರ್ ಕಾರ್ಡ್ ಹಾಗೂ ಪ್ಯಾನ್ ಕಾರ್ಡ್ ಜೆರಾಕ್ಸ್ ಪ್ರತಿಗಳೊಂದಿಗೆ ಸಂದರ್ಶನಕ್ಕೆ ಹಾಜರಾಗಬೇಕು. ಭಾಗವಹಿಸುವ ಅಭ್ಯರ್ಥಿಗಳಿಗೆ ನೋಂದಣಿ ಕಡ್ಡಾಯವಾಗಿದೆ. ಯುವನಿಧಿ ಯೋಜನೆಯ ಫಲಾನುಭವಿಗಳು ಕಡ್ಡಾಯವಾಗಿ ಸಂದರ್ಶನದಲ್ಲಿ ಪಾಲ್ಗೊಳ್ಳಬೇಕು ಎಂದು ಪ್ರಕಟಣೆ ತಿಳಿಸಿದೆ.ಹೆಚ್ಚಿನ ಮಾಹಿತಿಗಾಗಿ 9063441571, 6363330688 ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ ಪಿ.ಎನ್. ತಿಳಿಸಿದ್ದಾರೆ.

## ಎಸ್‌ಐಆರ್ :7.82 ಲಕ್ಷ ಎನ್ಯುಮರೇಷನ್ ಫಾರ್ಮ್ ಡಿಜಿಟಲೀಕರಣ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಚುರುಕುಗೊಂಡಿದ್ದು, ಆ.12ರವರೆಗೆ 7,82,048 ಎನ್ಯುಮರೇಷನ್ ಫಾರ್ಮ್‌ಗಳನ್ನು ಡಿಜಿಟಲೀಕರಣ ಮಾಡಲಾಗಿದೆ ಎಂದು ಜಿಲ್ಲಾಡಳಿತ ತಿಳಿಸಿದೆ. ಜಿಲ್ಲೆಯಲ್ಲಿ ಒಟ್ಟು 9,02,947 ಮತದಾರರು ಮತದಾರರ ಪಟ್ಟಿಯಲ್ಲಿದ್ದು, 967 ಮತಗಟ್ಟೆಗಳಿವೆ. ಭಾರತೀಯ ಚುನಾವಣಾ ಆಯೋಗದ ನಿರ್ದೇಶನದಂತೆ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆಮನೆಗೆ ಭೇಟಿ ನೀಡಿ ಮತದಾರರಿಗೆ ಎನ್ಯುಮರೇಷನ್ ಫಾಮ್‌ಗಳನ್ನು ವಿತರಿಸುತ್ತಿದ್ದಾರೆ. ಆ.12ರವರೆಗೆ 9,02,947 ಎನ್ಯುಮರೇಷನ್ ಫಾಮ್‌ಗಳನ್ನು ವಿತರಿಸಲಾಗಿದ್ದು, ಈ ಪೈಕಿ 7,82,048 ಫಾರ್ಮ್‌ಗಳ ಡಿಜಿಟಲೀಕರಣ ಪೂರ್ಣಗೊಂಡಿದೆ. ಮನೆಮನೆಗೆ ಭೇಟಿ ನೀಡಿ ಎನ್ಯುಮರೇಷನ್ ಫಾರ್ಮ್ ವಿತರಿಸುವ ಕಾರ್ಯವನ್ನು ಭಾರತೀಯ ಚುನಾವಣಾ ಆಯೋಗದ ಆದೇಶದಂತೆ ಆ.17ರವರೆಗೆ ವಿಸ್ತರಿಸಲಾಗಿದೆ ಎಂದು ಜಿಲ್ಲಾಡಳಿತ ಪ್ರಕಟಣೆಯಲ್ಲಿ ತಿಳಿಸಿದೆ.

## ಸ್ವಯಂ ಉದ್ಯೋಗಕ್ಕೆ ಸಹಾಯಧನ: ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

202627ನೇ ಸಾಲಿನ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉದ್ಯಮಾಸಕ್ತರಿಗೆ ಅತಿ ಸಣ್ಣ ಉತ್ಪಾದನಾ ಘಟಕ ಸ್ಥಾಪಿಸಿ ಸ್ವಯಂ ಉದ್ಯೋಗ ಆರಂಭಿಸಲು ಶೇ.60ರಷ್ಟು ಸಹಾಯಧನ ನೀಡಲು ಅರ್ಜಿ ಆಹ್ವಾನಿಸಲಾಗಿದೆ.ಸಹಾಯಧನವು ಗರಿಷ್ಠ ₹5 ಲಕ್ಷಗಳ ಮಿತಿಗೆ ಒಳಪಟ್ಟಿರಲಿದೆ. ಅರ್ಹ ಆಸಕ್ತರು ಆ.28ರೊಳಗೆ ಅರ್ಜಿ ಸಲ್ಲಿಸಬೇಕು ಎಂದು ಗದಗ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಯೋಜನೆ ಹಾಗೂ ಅರ್ಜಿ ಸಲ್ಲಿಕೆ ಕುರಿತು ಹೆಚ್ಚಿನ ಮಾಹಿತಿಗಾಗಿ 9482931249 ದೂರವಾಣಿ ಸಂಖ್ಯೆಗೆ ಅಥವಾ ಗದಗ ಜಿಲ್ಲಾ ಕೈಗಾರಿಕಾ ಕೇಂದ್ರದ ಅಧೀಕ್ಷಕ ಮುತ್ತಣ್ಣ ಸಿ. ತಿಪ್ಪಣ್ಣವರ ಅವರನ್ನು ಸಂಪರ್ಕಿಸಬಹುದು.

### ಕರ್ನಾಟಕ ನಾಗರಿಕ ಸಮಾಜದಿಂದ ಸಿಎಂಗೆ ಮನವಿ | ವೈದ್ಯಕೀಯ ಪ್ರವೇಶದ ಅಧಿಕಾರ ರಾಜ್ಯಗಳಿಗೆ ಮರಳಿಸಲು ಒತ್ತಾಯ

# ನೀಟ್-ಎನ್‌ಟಿಎ ರದ್ದತಿಗೆ ವಿಧಾನಸಭೆಯಲ್ಲಿ ನಿರ್ಣಯಕ್ಕೆ ಆಗ್ರಹ!

**ವಿಜಯಸಾಕ್ಷಿ ಸುದ್ದಿ, ಗದಗ/ಹುಬ್ಬಳ್ಳಿ**

ನೀಟ್ ಪರೀಕ್ಷೆಯಲ್ಲಿನ ಪ್ರಶ್ನೆಪತ್ರಿಕೆ ಸೋರಿಕೆ, ಪರೀಕ್ಷಾ ಅಕ್ರಮ ಹಾಗೂ ಕೇಂದ್ರೀಕೃತ ಪರೀಕ್ಷಾ ವ್ಯವಸ್ಥೆಯಲ್ಲಿನ ಗೊಂದಲಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ನೀಟ್ ಹಾಗೂ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್‌ಟಿಎ) ರದ್ದುಗೊಳಿಸುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಿ ಕರ್ನಾಟಕ ವಿಧಾನಮಂಡಲದಲ್ಲಿ ನಿರ್ಣಯ ಅಂಗೀಕರಿಸಬೇಕು ಎಂದು ಕರ್ನಾಟಕ ನಾಗರಿಕ ಸಮಾಜ ಆಗ್ರಹಿಸಿದೆ.

ಈ ಕುರಿತು ಮುಖ್ಯಮಂತ್ರಿ ಅವರಿಗೆ ಇ-ಮೇಲ್ ಮೂಲಕ ಮನವಿ ಸಲ್ಲಿಸಿರುವ ನಾಗರಿಕ ಸಮಾಜದ ಗಣ್ಯರು, ವೈದ್ಯಕೀಯ ಪ್ರವೇಶದ ನೀತಿ ಮತ್ತು ಪ್ರಕ್ರಿಯೆಯನ್ನು ರಾಜ್ಯಗಳಿಗೆ ಮರಳಿ ಒಪ್ಪಿಸಬೇಕು ಎಂದು ಒತ್ತಾಯಿಸಿದ್ದಾರೆ. ಸಾಹಿತಿ ಹಾಗೂ ಪ್ರಕಾಶಕ ಬಸವರಾಜ ಸೂಳಿಭಾವಿ ಅವರು ಪತ್ರಿಕೆಯ ಪ್ರಕಟಣೆಗಾಗಿ ಮನವಿಯ ಪ್ರತಿಯನ್ನು ಬಿಡುಗಡೆ ಮಾಡಿದ್ದಾರೆ. ಮನವಿಯಲ್ಲಿ, ನೀಟ್ ಕಡ್ಡಾಯಗೊಳಿಸಿರು ವುದರಿಂದ ರಾಜ್ಯಗಳ ಶೈಕ್ಷಣಿಕ ಸ್ವಾಯತ್ತತೆ, ಸಾಮಾಜಿಕ ನ್ಯಾಯ ಹಾಗೂ ಸಮಾನ ಅವಕಾಶಗಳ ಮೇಲೆ ಪರಿಣಾಮ ಬೀರುತ್ತಿದೆ ಎಂದು ಆರೋಪಿಸಲಾಗಿದೆ. ವಿಭಿನ್ನ ಪಠ್ಯಕ್ರಮ, ಭಾಷೆ, ಗ್ರಾಮೀಣನಗರ ಅಸಮಾನತೆ ಹಾಗೂ ಸಾಮಾಜಿಕಆರ್ಥಿಕ ಹಿನ್ನೆಲೆಯ ವಿದ್ಯಾರ್ಥಿಗಳನ್ನು ಒಂದೇ ಪರೀಕ್ಷೆಯ ಮೂಲಕ ಅಳೆಯುವುದು ವಾಸ್ತವ ಸಮಾನತೆಯನ್ನು ಸಾಧಿಸುವುದಿಲ್ಲ ಎಂದು ಹೇಳಲಾಗಿದೆ.

ವಿದ್ಯಾರ್ಥಿಗಳ ಎರಡು ವರ್ಷಗಳ ಶಾಲಾ ಶಿಕ್ಷಣ, ನಿರಂತರ ಕಲಿಕೆ ಮತ್ತು ಪರಿಶ್ರಮವನ್ನು ಒಂದೇ ದಿನದ ಬಹು ಆಯ್ಕೆ ಪ್ರಶ್ನೆಗಳ ಪರೀಕ್ಷೆಗೆ ಸೀಮಿತಗೊಳಿಸುವುದರಿಂದ ಶಾಲಾ ಶಿಕ್ಷಣದ ಮಹತ್ವ ಕುಗ್ಗುತ್ತಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ದುಬಾರಿ ಕೋಚಿಂಗ್ ಪಡೆಯುವ ಸಾಮರ್ಥ್ಯ ಹೊಂದಿರುವ ನಗರ ಪ್ರದೇಶದ ಹಾಗೂ ಆರ್ಥಿಕವಾಗಿ




ಸಬಲ ಕುಟುಂಬಗಳ ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲವಾಗುತ್ತಿದ್ದು, ಸರ್ಕಾರಿ ಶಾಲೆ, ಗ್ರಾಮೀಣ ಪ್ರದೇಶ, ಕನ್ನಡ ಮಾಧ್ಯಮ ಹಾಗೂ ಹಿಂದುಳಿದ ಸಮುದಾಯಗಳ ವಿದ್ಯಾರ್ಥಿಗಳಿಗೆ ಅಸಮಾನ ಸ್ಪರ್ಧೆ ಎದುರಾಗುತ್ತಿದೆ ಎಂದು ನಾಗರಿಕ ಸಮಾಜದ ಪ್ರಮುಖರು ಅಭಿಪ್ರಾಯಪಟ್ಟಿದ್ದಾರೆ.

ಪ್ರಶ್ನೆಪತ್ರಿಕೆ ಸೋರಿಕೆ, ಪರೀಕ್ಷಾ ನಿರ್ವಹಣೆಯ ಲೋಪ ಹಾಗೂ ಅಂಕಗಳ ವಿಶ್ವಾಸಾರ್ಹತೆ ಕುರಿತು ಪದೇಪದೇ ವಿವಾದಗಳು ಎದುರಾಗಿರುವ ಹಿನ್ನೆಲೆಯಲ್ಲಿ ಕೇಂದ್ರೀಕೃತ ಪರೀಕ್ಷಾ ವ್ಯವಸ್ಥೆಯ ವಿಶ್ವಾಸಾರ್ಹತೆಯನ್ನೇ ಮರುಪರಿಶೀಲಿಸುವ ಅಗತ್ಯವಿದೆ ಎಂದು ತಿಳಿಸಿದ್ದಾರೆ.

ಕರ್ನಾಟಕದ ವೈದ್ಯಕೀಯ ಕಾಲೇಜುಗಳಿಗೆ ದ್ವಿತೀಯ ಪಿಯುಸಿ ಅಥವಾ +2ರಲ್ಲಿ ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು ಜೀವಶಾಸ್ತ್ರ ವಿಷಯಗಳಲ್ಲಿ ಪಡೆದ ಅಂಕಗಳ ಆಧಾರದ ಮೇಲೆ, ವೈಜ್ಞಾನಿಕ ನಾರ್ಮಲೈಸೇಷನ್ ಹಾಗೂ ಸಂವಿಧಾನಬದ್ಧ ಮೀಸಲಾತಿ ನಿಯಮಗಳನ್ನು ಪಾಲಿಸಿ ಪ್ರವೇಶ ನೀಡುವ ರಾಜ್ಯ ನೀತಿ ರೂಪಿಸಬೇಕು ಎಂದು ಆಗ್ರಹಿಸಲಾಗಿದೆ.

ತಮಿಳುನಾಡು ವಿಧಾನಸಭೆ ಈಗಾಗಲೇ ನೀಟ್‌ನಿಂದ ರಾಜ್ಯಕ್ಕೆ ವಿನಾಯಿತಿ ಪಡೆಯುವ ನಿಟ್ಟಿನಲ್ಲಿ ನಿರ್ಣಯ ಹಾಗೂ ಶಾಸನಾತ್ಮಕ ಕ್ರಮ ಕೈಗೊಂಡಿರುವುದನ್ನು ಉಲ್ಲೇಖಿಸಿರುವ ನಾಗರಿಕ ಸಮಾಜ, ಕರ್ನಾಟಕವೂ ಇದೇ ಮಾದರಿಯಲ್ಲಿ ರಾಜ್ಯದ ಹಕ್ಕು ಮತ್ತು ಸಾಮಾಜಿಕ ನ್ಯಾಯದ ಪರವಾಗಿ ನಿಲುವು ಪ್ರಕಟಿಸಬೇಕು ಎಂದು ಒತ್ತಾಯಿಸಿದೆ.

ಕರ್ನಾಟಕ ವಿಧಾನಮಂಡಲ ಅಧಿವೇಶನದಲ್ಲಿ ನೀಟ್ ರದ್ದತಿಗೆ ಕೇಂದ್ರವನ್ನು ಒತ್ತಾಯಿಸುವ ನಿರ್ಣಯ ಅಂಗೀಕರಿಸುವುದು, ಎನ್‌ಟಿಎ ರದ್ದುಗೊಳಿಸಿ ಕೇಂದ್ರೀಕೃತ ಪ್ರವೇಶ ಪರೀಕ್ಷಾ ವ್ಯವಸ್ಥೆಯನ್ನು ಮರುಪರಿಶೀಲಿಸುವಂತೆ ಒತ್ತಾಯಿಸುವುದು, ಪಿಯುಸಿ ಅಂಕ ಆಧಾರಿತ ವೈದ್ಯಕೀಯ ಪ್ರವೇಶ ನೀತಿ ರೂಪಿಸುವುದು ಸೇರಿದಂತೆ ಆರು ಪ್ರಮುಖ ಬೇಡಿಕೆಗಳನ್ನು ಮನವಿಯಲ್ಲಿ ಮುಂದಿಡಲಾಗಿದೆ.

ಇದರ ಜತೆಗೆ ವಿದ್ಯಾರ್ಥಿಗಳು, ಪೋಷಕರು, ಶಿಕ್ಷಕರು, ಶಿಕ್ಷಣ ತಜ್ಞರು, ವೈದ್ಯಕೀಯ ಶಿಕ್ಷಣ ಪರಿಣತರು ಹಾಗೂ ಎಲ್ಲ ರಾಜಕೀಯ ಪಕ್ಷಗಳೊಂದಿಗೆ ಸಾರ್ವಜನಿಕ ಸಮಾಲೋಚನೆ ನಡೆಸಬೇಕು.

ನೀಟ್ ವಿರೋಧಿ ನಿಲುವು ಹೊಂದಿರುವ ಇತರ ರಾಜ್ಯಗಳೊಂದಿಗೆ ಸಮನ್ವಯ ಸಾಧಿಸಿ ರಾಜ್ಯಗಳ ಶೈಕ್ಷಣಿಕ ಹಕ್ಕು ಹಾಗೂ ಒಕ್ಕೂಟ ವ್ಯವಸ್ಥೆಯ ರಕ್ಷಣೆಗೆ ರಾಷ್ಟ್ರಮಟ್ಟದ ಪ್ರಯತ್ನ ನಡೆಸಬೇಕು ಎಂದು ಒತ್ತಾಯಿಸಲಾಗಿದೆ.

ಮನವಿಗೆ ಸುಪ್ರೀಂ ಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ನ್ಯಾ. ಗೋಪಾಲಗೌಡ, ಶಿಕ್ಷಣ ತಜ್ಞ ನಿರಂಜನಾರಾಧ್ಯ ವಿ.ಪಿ., ಸಾಹಿತಿ ಬಸವರಾಜ ಸೂಳಿಭಾವಿ, ಪತ್ರಕರ್ತ ರಾಜಾರಾಮ ತಲ್ಲೂರು, ಸಾಹಿತಿ ಡಾ. ಎಚ್.ಎಸ್. ಅನುಪಮಾ, ವಿಶ್ರಾಂತ ಉಪಕುಲಪತಿ ಡಾ. ಸಬಿಹಾ ಭೂಮಿಗೌಡ, ಸಾಹಿತಿಗಳಾದ ಮೂಡ್ನಾಕೂಡ ಚಿನ್ನಸ್ವಾಮಿ, ಕೆ. ನೀಲಾ, ರಹಮತ್ ತರೀಕೆರೆ, ಪ್ರೊ. ಅಶೋಕ ಶೆಟ್ಟರ ಸೇರಿದಂತೆ ರಾಜ್ಯದ ವಿವಿಧ ಕ್ಷೇತ್ರಗಳ 117 ಗಣ್ಯರು ಸಹಿ ಹಾಕಿದ್ದಾರೆ.

ಕರ್ನಾಟಕದ ವಿದ್ಯಾರ್ಥಿಗಳ ಭವಿಷ್ಯ ಹಾಗೂ ಸಂವಿಧಾನಬದ್ಧ ಹಕ್ಕುಗಳನ್ನು ರಕ್ಷಿಸಲು ರಾಜ್ಯ ಸರ್ಕಾರ ಈ ಕುರಿತು ತಕ್ಷಣ ನಿರ್ಣಾಯಕ ಕ್ರಮ ಕೈಗೊಳ್ಳಬೇಕು ಎಂದು ನಾಗರಿಕ ಸಮಾಜದ ಪ್ರತಿನಿಧಿಗಳು ಮುಖ್ಯಮಂತ್ರಿ ಅವರನ್ನು ಒತ್ತಾಯಿಸಿದ್ದಾರೆ.

**ನಾಗರಿಕ ಸಮಾಜದ ಪ್ರಮುಖ ಆಗ್ರಹಗಳು**

1. ನೀಟ್ ಪರೀಕ್ಷೆ ರದ್ದುಪಡಿಸಿ, ವೈದ್ಯಕೀಯ ಪ್ರವೇಶದ ಅಧಿಕಾರವನ್ನು ರಾಜ್ಯಗಳಿಗೆ ಮರಳಿಸಬೇಕು.
2. ಎನ್‌ಟಿಎ ರದ್ದುಗೊಳಿಸಿ, ಕೇಂದ್ರೀಕೃತ ಪ್ರವೇಶ ಪರೀಕ್ಷಾ ವ್ಯವಸ್ಥೆಯನ್ನು ಮರುಪರಿಶೀಲಿಸಬೇಕು.
3. ದ್ವಿತೀಯ ಪಿಯುಸಿ/+2 ಅಂಕಗಳ ಆಧಾರದ ಮೇಲೆ ವೈದ್ಯಕೀಯ ಪ್ರವೇಶಕ್ಕೆ ರಾಜ್ಯ ನೀತಿ ರೂಪಿಸಬೇಕು.
4. ಸಂವಿಧಾನದ ಅನುಚ್ಛೇದ 254(2)ರಡಿ ಪ್ರತ್ಯೇಕ ಮಸೂದೆ ರೂಪಿಸಿ ರಾಷ್ಟ್ರಪತಿಯ ಅನುಮೋದನೆಗೆ ಕಳುಹಿಸಬೇಕು.
5. ವಿದ್ಯಾರ್ಥಿಗಳು, ಪೋಷಕರು, ಶಿಕ್ಷಕರು ಹಾಗೂ ಶಿಕ್ಷಣ ತಜ್ಞರೊಂದಿಗೆ ಸಾರ್ವಜನಿಕ ಸಮಾಲೋಚನೆ ನಡೆಸಬೇಕು.
6. ನೀಟ್ ವಿರೋಧಿ ನಿಲುವಿನ ಇತರ ರಾಜ್ಯಗಳೊಂದಿಗೆ ಸಮನ್ವಯ ಸಾಧಿಸಬೇಕು.

---

**ಸಂಕ್ಷಿಪ್ತ ಸುದ್ದಿಗಳು**

### ಯುದ್ಧದ ಸಂದರ್ಭದಲ್ಲೂ ಮಾನವ ಹಕ್ಕುಗಳ ರಕ್ಷಣೆಗೆ ಒತ್ತು: ಎಸ್.ಕೆ. ಸಂಗಳದ

## ಮಾನವೀಯತೆಯೇ ಜಿನೀವಾ ಒಪ್ಪಂದಗಳ ಮೂಲ ಆಶಯ




**ವಿಜಯಸಾಕ್ಷಿ ಸುದ್ದಿ, ಗದಗ**

ಯುದ್ಧದ ಸಂದರ್ಭದಲ್ಲಿಯೂ ಮಾನವೀಯ ಮೌಲ್ಯಗಳು ಹಾಗೂ ಮಾನವ ಹಕ್ಕುಗಳನ್ನು ಕಾಪಾಡುವುದು ಜಿನೀವಾ ಒಪ್ಪಂದಗಳ ಪ್ರಮುಖ ಉದ್ದೇಶವಾಗಿದೆ ಎಂದು ಯುವ ನ್ಯಾಯವಾದಿ ಎಸ್.ಕೆ. ಸಂಗಳದ ಹೇಳಿದರು.

ನಗರದ ಪಂ. ಪಂಚಾಕ್ಷರ ಗವಾಯಿಗಳವರ ಕಲಾ ಮಹಾವಿದ್ಯಾಲಯದಲ್ಲಿ ಯೂತ್ ರೆಡ್ ಕ್ರಾಸ್ ಘಟಕದ ಆಶ್ರಯದಲ್ಲಿ ನಡೆದ ವಿಶ್ವ ಜಿನೀವಾ ಒಪ್ಪಂದ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಯುದ್ಧದಿಂದ ಉಂಟಾಗುವ ಭೀಕರ ಪರಿಣಾಮಗಳನ್ನು ಕಣ್ಣಾರೆ ಕಂಡ ಹೆನ್ರಿ ಡ್ಯೂನಾಂಟ್ ಅವರ ಮಾನವೀಯ ಚಿಂತನೆಯ ಫಲವಾಗಿ ರೆಡ್ ಕ್ರಾಸ್ ಸಂಸ್ಥೆ ಹಾಗೂ ಜಿನೀವಾ ಒಪ್ಪಂದಗಳ ಮಹತ್ವ ಬೆಳೆಯಿತು ಎಂದರು.

ಜಿನೀವಾ ಒಪ್ಪಂದಗಳ ನಾಲ್ಕು ಪ್ರಮುಖ ಒಪ್ಪಂದಗಳ ಆಶಯ ಹಾಗೂ ಅವುಗಳ ಮಹತ್ವವನ್ನು ವಿವರಿಸಿದ ಅವರು, ಯುದ್ಧದ ಸಂದರ್ಭದಲ್ಲಿಯೂ ಗಾಯಾಳುಗಳು, ನಾಗರಿಕರು ಹಾಗೂ ಯುದ್ಧದಲ್ಲಿ ಭಾಗಿಯಾಗದವರ ರಕ್ಷಣೆಗೆ ಮಾನವೀಯ ನಿಯಮಗಳನ್ನು ರೂಪಿಸಲಾಗಿದೆ. ಈ ಎಲ್ಲ ಒಪ್ಪಂದಗಳ ಮೂಲ ಆಶಯವೇ ಮಾನವೀಯತೆ ಎಂದು ಹೇಳಿದರು.

ಪಂ. ಪಂಚಾಕ್ಷರ ಗವಾಯಿಗಳವರ ಸಂಗೀತ ಮಹಾವಿದ್ಯಾಲಯದ ಪ್ರಾಚಾರ್ಯ ಪಂ. ನಾರಾಯಣ ಕೊಳಚಿ ಮಾತನಾಡಿ, ಪರಸ್ಪರ ತಿಳುವಳಿಕೆ, ಸಹಕಾರ ಹಾಗೂ ಸಹಬಾಳ್ವೆಯಿಂದ ಮಾನವ ಜೀವನ ಮತ್ತಷ್ಟು ಸುಂದರವಾಗುತ್ತದೆ.

ಮಾನವೀಯ ಮೌಲ್ಯಗಳನ್ನು ಜನರಲ್ಲಿ ಬೆಳೆಸುವ ಕಾರ್ಯದಲ್ಲಿ ವಿಶ್ವ ರೆಡ್ ಕ್ರಾಸ್ ಸಂಸ್ಥೆ ಪ್ರಮುಖ ಪಾತ್ರ ವಹಿಸುತ್ತಿದ್ದು, ಅದರ ಸ್ವಯಂಸೇವಕರ ಸೇವೆ ಅವಿಸ್ಮರಣೀಯವಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾ. ಆರ್.ಎಸ್. ದಾನರಡ್ಡಿ ಮಾತನಾಡಿ, ಬಸವಾದಿ ಶಿವಶರಣರ ವಚನಗಳಲ್ಲಿ ಮಾನವೀಯತೆಯ ಸಂದೇಶ ಧಾರಾಳವಾಗಿ ವ್ಯಕ್ತವಾಗಿದೆ. ವಚನಗಳ ಸಾರವನ್ನು ಪ್ರತಿಯೊಬ್ಬರೂ ತಮ್ಮ ದೈನಂದಿನ ಬದುಕಿನಲ್ಲಿ ಅಳವಡಿಸಿಕೊಂಡರೆ ಸಮಾಜದಲ್ಲಿ ಶಾಂತಿ, ಸಹಬಾಳ್ವೆ ಬೆಳೆದು ಯುದ್ಧಗಳಿಗೆ ಕೊನೆ ಹಾಡುವ ವಾತಾವರಣ ನಿರ್ಮಾಣವಾಗುತ್ತದೆ ಎಂದು ಹೇಳಿದರು.

ಯೂತ್ ರೆಡ್ ಕ್ರಾಸ್ ಅಧಿಕಾರಿ ಡಾ. ವ್ಹಿ.ಎ. ನಿಂಗೋಜಿ ಪ್ರಾಸ್ತಾವಿಕವಾಗಿ ಮಾತನಾಡಿ, ಜಿನೀವಾ ಒಪ್ಪಂದಗಳು ರೂಪುಗೊಂಡ ಐತಿಹಾಸಿಕ ಹಿನ್ನೆಲೆ ಹಾಗೂ ಅವುಗಳ ಬೆಳವಣಿಗೆಯ ಕುರಿತು ವಿವರಿಸಿದರು.

ಕಾರ್ಯಕ್ರಮದಲ್ಲಿ ಡಾ. ಶಿವಬಸವಯ್ಯ ಗಡ್ಡದೇವರಮಠ, ಡಾ. ಹೂಗಾರ, ಡಾ. ವಿಶ್ವನಾಥ ಹಿರೇಮಠ, ಪ್ರೊ. ಮಹಾಲಕ್ಷ್ಮೀ ಹೆಗಡೆ, ಶ್ರೀಮತಿ ಜೋಷಿ ವ್ಹಿ.ಆರ್., ಶ್ರೀಮತಿ ವ್ಹಿ.ಎಲ್. ಮುಂದಿನಮನಿ, ಸುಭಾಷ ಶಂಕರ, ಪ್ರೊ. ಬಿ.ಕೆ. ಪೂಜಾರ, ಪ್ರೊ. ಎಂ.ಆರ್. ಚೋಳಾಳ ಸೇರಿದಂತೆ ಕಲಾ ಹಾಗೂ ಸಂಗೀತ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಪ್ರೊ. ಶ್ರೀಮತಿ ಎಂ.ಎನ್. ಹೊಂಬಾಳಿ ಕಾರ್ಯಕ್ರಮ ನಿರೂಪಿಸಿ ವಂದನಾರ್ಪಣೆ ಸಲ್ಲಿಸಿದರು. ಬಳಿಕ ಪ್ರೊಜೆಕ್ಟರ್ ಮೂಲಕ ಜಿನೀವಾ ಒಪ್ಪಂದಗಳ ಐತಿಹಾಸಿಕ ಹಿನ್ನೆಲೆ ಹಾಗೂ ಬೆಳವಣಿಗೆಯ ಕುರಿತು ದೃಶ್ಯಾವಳಿಗಳನ್ನು ಪ್ರದರ್ಶಿಸಲಾಯಿತು.

---

### ಗದಗ-ಕೃಷ್ಣಾವರ-ವಾಡಿ ರೈಲು ಮಾರ್ಗಕ್ಕೆ ಸಂಪೂರ್ಣ ಬೆಂಬಲ

## ರೈಲು ಹೋರಾಟಕ್ಕೆ ನಿವೃತ್ತ ಸೈನಿಕರ ಬೆಂಬಲ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ನರೇಗಲ್ಲ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಜನರ ಬಹುದಿನಗಳ ಬೇಡಿಕೆಯಾಗಿರುವ ಗದಗಕೃಷ್ಣಾವರವಾಡಿ ರೈಲು ಮಾರ್ಗದ ಹೋರಾಟಕ್ಕೆ ನರೇಗಲ್ಲ ನಿವೃತ್ತ ಸೈನಿಕರ ಸಂಘ ಸಂಪೂರ್ಣ ಬೆಂಬಲ ನೀಡಲು ನಿರ್ಧರಿಸಿದೆ ಎಂದು ಸಂಘದ ಅಧ್ಯಕ್ಷ ಶಿವಪುತ್ರಪ್ಪ ಸಂಗನಾಳ ಹೇಳಿದರು. ನರೇಗಲ್ಲ ನಿವೃತ್ತ ಸೈನಿಕರ ಸಂಘದ ಕಚೇರಿಯಲ್ಲಿ ನಡೆದ ಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ನರೇಗಲ್ಲ ಭಾಗದ ಜನರ ಬಹುದಿನಗಳ ರೈಲು ಬೇಡಿಕೆಗೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ನಡೆಯುತ್ತಿರುವ ಹೋರಾಟಕ್ಕೆ ಎಲ್ಲರೂ ಒಗ್ಗಟ್ಟಿನಿಂದ ಕೈಜೋಡಿಸಬೇಕು. ರೈಲು ಸಂಪರ್ಕ ದೊರೆತರೆ ಈ ಭಾಗದ ಜನರಿಗೆ ಸಂಚಾರ, ವ್ಯಾಪಾರ ಹಾಗೂ ಉದ್ಯೋಗ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಅನುಕೂಲವಾಗಲಿದೆ ಎಂದು ಅವರು ಹೇಳಿದರು.

**ಮಕ್ಕಳಲ್ಲಿ ದೇಶಾಭಿಮಾನ ಬೆಳೆಸಿ**

ನಿವೃತ್ತ ಸೈನಿಕ ಎಂ.ಎಸ್. ಮಲ್ಲನಗೌಡ್ರ ಮಾತನಾಡಿ, ಮಕ್ಕಳಲ್ಲಿ ಉತ್ತಮ ಸಂಸ್ಕಾರ, ಶಿಸ್ತು ಹಾಗೂ ದೇಶಾಭಿಮಾನ ಬೆಳೆಸಲು ಪಾಲಕರು ಹೆಚ್ಚಿನ ಗಮನ ನೀಡಬೇಕು. ಇತ್ತೀಚಿನ ದಿನಗಳಲ್ಲಿ ಮಕ್ಕಳು ಮೊಬೈಲ್ ಬಳಕೆಗೆ ಹೆಚ್ಚು ಸಮಯ ನೀಡುತ್ತಿದ್ದು, ಪಾಲಕರು ಮಕ್ಕಳ ಚಟುವಟಿಕೆಗಳ ಮೇಲೆ ನಿಗಾ ವಹಿಸಬೇಕು ಎಂದರು.

ಉತ್ತಮ ಶಿಕ್ಷಣದ ಜತೆಗೆ ಸಾಮಾಜಿಕ ಜವಾಬ್ದಾರಿ ಹಾಗೂ ಹಿರಿಯರಿಗೆ ಗೌರವ ನೀಡುವ ಗುಣಗಳನ್ನು ಮಕ್ಕಳಲ್ಲಿ ಬೆಳೆಸಬೇಕು. ಕುಟುಂಬದ ಆಸ್ತಿಪಾಸ್ತಿಗಳ ಸುರಕ್ಷತೆಗಾಗಿ ವರ್ಷಕ್ಕೊಮ್ಮೆಯಾದರೂ ಜಮೀನಿನ ಇ-ಉತಾರ ಪಡೆದು ಪರಿಶೀಲಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

> **ರೈಲು ಹೋರಾಟ ಸಮಿತಿ ಯಾವಾಗ ಸಭೆ ಅಥವಾ ಹೋರಾಟಕ್ಕೆ ಕರೆ ನೀಡಿದರೂ ನಿವೃತ್ತ ಸೈನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸಂಪೂರ್ಣ ಬೆಂಬಲ ನೀಡಬೇಕು. ದೇಶದ ಗಡಿಯಲ್ಲಿ ಸೇವೆ ಸಲ್ಲಿಸಿದ ನಾವು ನಿವೃತ್ತಿಯ ನಂತರವೂ ಸಮಾಜದ ಅಭಿವೃದ್ಧಿ ಕಾರ್ಯಗಳಲ್ಲಿ ಸಕ್ರಿಯವಾಗಿ ಕೈಜೋಡಿಸಬೇಕು.**
>
> **- ಶಿವಪುತ್ರಪ್ಪ ಸಂಗನಾಳ,**
> ಅಧ್ಯಕ್ಷ, ನಿವೃತ್ತ ಸೈನಿಕರ ಸಂಘ, ನರೇಗಲ್ಲ

**ಕಾರ್ಗಿಲ್ ವಿಜಯೋತ್ಸವ ಯಶಸ್ಸಿಗೆ ಅಭಿನಂದನೆ**

ಜುಲೈ 26ರಂದು ನಡೆದ ಕಾರ್ಗಿಲ್ ವಿಜಯೋತ್ಸವವನ್ನು ಯಶಸ್ವಿಗೊಳಿಸಿದ ಸಂಘದ ಸದಸ್ಯರನ್ನು ಶಿವಪುತ್ರಪ್ಪ ಸಂಗನಾಳ ಅಭಿನಂದಿಸಿದರು. ಆ.15ರಂದು ಸಂತೆ ಬಜಾರ್‌ನ ಗಣಪತಿ ದೇವಸ್ಥಾನದಲ್ಲಿ ಸ್ವಾತಂತ್ರ್ಯ ದಿನಾಚರಣೆ ಹಮ್ಮಿಕೊಳ್ಳಲಾಗಿದ್ದು, ನಿವೃತ್ತ ಸೈನಿಕರು, ಸಾರ್ವಜನಿಕರು, ಯುವಕರು ಹಾಗೂ ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಮನವಿ ಮಾಡಿದರು.

ಸಭೆಯಲ್ಲಿ ಗೌರವಾಧ್ಯಕ್ಷ ಶರಣಪ್ಪ ನಾಶಿಪುಡಿ, ಶಿವಪ್ಪ ಶಿವಾಪುರ, ದಾವಲಸಾಬ ಕಿಲ್ಲೇದಾರ, ಸಂಗಪ್ಪ ಕುಷ್ಟಗಿ, ರಾಮಪ್ಪ ರೋಣದ, ಕುಮಾರಸ್ವಾಮಿ ಕೋರಧಾನ್ಯಮಠ, ಪ್ರಭುದೇವ ಮುಕ್ಕನಗೌಡ್ರ, ಮಂದಾಲಪ್ಪ ಸಂಗನಾಳ, ಗುರುಶಾಂತಗೌಡ ಮಲ್ಲನಗೌಡ್ರ, ಸಿದ್ರಾಮಪ್ಪ ಕಟ್ಟಿಮನಿ, ಮಲ್ಲಪ್ಪ ಕಡೆತೋಟದ, ಉಮೇಶ ಕರಮುಡಿ, ಈರಪ್ಪ ದೊಡ್ಡಣ್ಣವರ, ಶಿವಾನಂದ ಬಂಡಿಹಾಳ, ಬಸವೇಶ್ವರ ಚಿಕ್ಕೊಪ್ಪದ, ಈಶ್ವರಚಂದ್ರ ಬಾಗಲಿ, ಬಸವರಾಜ ಯಕ್ಕುಂಡಿ, ಸುಮಿತ್ರಾ ದಳವಾಯಿ, ಬಸವರಾಜ ಕಡೆತೋಟದ, ಇಮಾಮಸಾಬ ಕೋಲಕಾರ, ಮಲ್ಲಮ್ಮ ಭೈರಗೊಂಡ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಕಾರ್ಯದರ್ಶಿ ದಾದಾಸಾಬ ನದಾಫ ವಂದಿಸಿದರು.

---

### 1ರಿಂದ 19 ವರ್ಷದೊಳಗಿನ ಮಕ್ಕಳ ಆರೋಗ್ಯದತ್ತ ವಿಶೇಷ ಕಾಳಜಿ ಅಗತ್ಯ

## ಜಂತು ಹುಳು ನಿವಾರಣಾ ಮಾತ್ರೆ ತಪ್ಪದೇ ಸೇವಿಸಿ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮಕ್ಕಳ ಸರ್ವಾಂಗೀಣ ಬೆಳವಣಿಗೆಗೆ ಜಂತು ಹುಳು ಸೋಂಕು ಅಡ್ಡಿಯಾಗುವುದರಿಂದ 1ರಿಂದ 19 ವರ್ಷದೊಳಗಿನ ಎಲ್ಲ ಮಕ್ಕಳು ಜಂತು ಹುಳು ನಿವಾರಣಾ ಮಾತ್ರೆಯನ್ನು ತಪ್ಪದೇ ಸೇವಿಸಬೇಕು ಎಂದು ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಡಿ. ಬೆನ್ನೂರ ಹೇಳಿದರು.

ಪಟ್ಟಣದ ಶ್ರೀ ರೇಣುಕಾಚಾರ್ಯ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ನಿಡಗುಂದಿ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಶಿಕ್ಷಣ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಜಂತು ಹುಳು ನಿವಾರಣಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸರ್ಕಾರದಿಂದ ಆರು ತಿಂಗಳಿಗೊಮ್ಮೆ ಉಚಿತವಾಗಿ ನೀಡಲಾಗುವ ಆಲ್ಬೆಂಡಜೋಲ್ ಮಾತ್ರೆಯನ್ನು ಮಕ್ಕಳು ತಪ್ಪದೇ ಸೇವಿಸಬೇಕು. ಈ ಹಿಂದೆ ಮಾತ್ರೆ ಸೇವಿಸಿದ್ದರೂ ಸಹ ಪಲ್ಸ್ ಪೋಲಿಯೊ ಮಾದರಿಯಲ್ಲಿ ನಿಗದಿತ ದಿನದಂದು ಎಲ್ಲ ಮಕ್ಕಳು ಮಾತ್ರೆ ಸೇವಿಸುವುದು ಅಗತ್ಯ ಎಂದರು.

ಜಂತು ಹುಳು ಸೋಂಕಿನಿಂದ ರಕ್ತಹೀನತೆ, ಪೌಷ್ಟಿಕಾಂಶದ ಕೊರತೆ, ಹಸಿವಾಗದಿರುವುದು,



ತೂಕ ಹೆಚ್ಚಾಗದಿರುವುದು, ವಾಂತಿ, ನಿಶಕ್ತಿ, ಅತಿಸಾರ ಹಾಗೂ ಓದಿನಲ್ಲಿ ಏಕಾಗ್ರತೆಯ ಕೊರತೆ ಸೇರಿದಂತೆ ವಿವಿಧ ಆರೋಗ್ಯ ಸಮಸ್ಯೆಗಳು ಉಂಟಾಗಬಹುದು.

ಹೀಗಾಗಿ ಮಕ್ಕಳ ಆರೋಗ್ಯದ ದೃಷ್ಟಿಯಿಂದ ಜಂತು ಹುಳು ನಿವಾರಣಾ ಮಾತ್ರೆ ಸೇವಿಸುವುದು ಅತ್ಯಂತ ಮುಖ್ಯವಾಗಿದೆ ಎಂದು ತಿಳಿಸಿದರು.

**ಸ್ವಚ್ಛತೆಯೇ ಸೋಂಕು ತಡೆಗೆ ಪ್ರಮುಖ ಅಸ್ತ್ರ**

ಆರೋಗ್ಯ ನಿರೀಕ್ಷಣಾಧಿಕಾರಿ ಮಂಜುನಾಥ ಜಾಲಿಹಾಳ ಮಾತನಾಡಿ, ಜಂತು ಹುಳು ಸೋಂಕು ತಡೆಗಟ್ಟಲು ಊಟಕ್ಕೂ ಮುನ್ನ ಸಾಬೂನಿನಿಂದ ಕೈತೊಳೆಯುವ ಅಭ್ಯಾಸ ಬೆಳೆಸಿಕೊಳ್ಳಬೇಕು. ಚಪ್ಪಲಿ ಧರಿಸುವುದು, ಶೌಚಾಲಯ ಬಳಸುವುದು, ನಿಯಮಿತವಾಗಿ ಉಗುರು ಕತ್ತರಿಸಿಕೊಳ್ಳುವುದು, ಶುದ್ಧ ಕುಡಿಯುವ ನೀರು ಬಳಸುವುದು ಹಾಗೂ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವ ಮೂಲಕ ಸೋಂಕಿನಿಂದ ದೂರವಿರಬಹುದು ಎಂದರು.

ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆ ಸಿಬ್ಬಂದಿಗಳಾದ ಸಂಗೀತಾ ಮುಚಖಂಡಿ, ವಿಜಯಲಕ್ಷ್ಮೀ ಪೊಲೀಸ್ ಪಾಟೀಲ, ರೇಷ್ಮಾ ಓಲೇಕಾರ, ರಹಮತ್ ಬಾನು ಶರಬತ್ತವಾಲ, ಶಾಲಾ ಶಿಕ್ಷಕರಾದ ನಿರ್ಮಲಾ ಹಿರೇಮಠ, ಅಕ್ಕಮಹಾದೇವಿ ಬಿಂಗಿ ಸೇರಿದಂತೆ ಆರೋಗ್ಯ ಇಲಾಖೆ ಹಾಗೂ ಶಾಲಾ ಸಿಬ್ಬಂದಿ ಉಪಸ್ಥಿತರಿದ್ದರು.

---

### ಇನ್ನರ್ ವೀಲ್ ಕ್ಲಬ್ ಸಭೆಯಲ್ಲಿ ನಿರ್ಧಾರ

## ಸೇವಾ ಕಾರ್ಯಗಳಿಗೆ ಇನ್ನಷ್ಟು ವೇಗ




**ವಿಜಯಸಾಕ್ಷಿ ಸುದ್ದಿ, ಗದಗ**

ಇನ್ನರ್ ವೀಲ್ ಕ್ಲಬ್ ಗದಗಬೆಟಗೇರಿಯ ಸೇವಾ ಹಾಗೂ ಸಮಾಜಮುಖಿ ಚಟುವಟಿಕೆಗಳಿಗೆ ಮತ್ತಷ್ಟು ವೇಗ ನೀಡುವ ಕುರಿತು ನಗರದ ರೋಟರಿ ಐ ಕೇರ್ ಸೆಂಟರ್‌ನ ಕುಷ್ಟಗಿ ಮೆಮೋರಿಯಲ್ ಹಾಲ್‌ನಲ್ಲಿ ನಡೆದ ಮಾಸಿಕ ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಯ ಆರಂಭದಲ್ಲಿ ಶ್ರೀಮತಿ ವೀಣಾ ಕಾವೇರಿ ಹಾಗೂ ಶ್ರೀಮತಿ ಮೀನಾಕ್ಷಿ ಕೊರವನವರ ಇನ್ನರ್ ವೀಲ್ ಪ್ರಾರ್ಥನೆ ನೆರವೇರಿಸಿದರು. ಕಾರ್ಯದರ್ಶಿ ಶ್ರೀಮತಿ ಪೂಜಾ ಭೂಮಾ ಹಿಂದಿನ ಸಭೆಯ ನಡಾವಳಿಗಳನ್ನು ಮಂಡಿಸಿ ಅನುಮೋದನೆ ಪಡೆದರು.

ಕ್ಲಬ್ ವತಿಯಿಂದ ಕಳೆದ ತಿಂಗಳಲ್ಲಿ ಕೈಗೊಂಡ ವಿವಿಧ ಸೇವಾ ಹಾಗೂ ಸಮಾಜಮುಖಿ ಕಾರ್ಯಕ್ರಮಗಳ ಅನುಷ್ಠಾನ ಮತ್ತು ಫಲಿತಾಂಶಗಳನ್ನು ಸಭೆಯಲ್ಲಿ ಪರಿಶೀಲಿಸಲಾಯಿತು. ಮುಂಬರುವ ದಿನಗಳಲ್ಲಿ ಕೈಗೊಳ್ಳಬೇಕಾದ ವಿವಿಧ ಯೋಜನೆಗಳ ಕುರಿತು ಸದಸ್ಯರು ಚರ್ಚಿಸಿ ಸಲಹೆಗಳನ್ನು ನೀಡಿದರು.

ಪಿ.ಡಿ.ಸಿ. ಪ್ರೇಮಾ ಗುಳಗೌಡರ ಅವರು ಕ್ಲಬ್‌ನ ಆಡಳಿತ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸುವ ವಿಧಾನ, ಕಚೇರಿ ದಾಖಲೆಗಳನ್ನು ವ್ಯವಸ್ಥಿತವಾಗಿ ನಿರ್ವಹಿಸುವುದು ಹಾಗೂ ಕಾರ್ಯಕ್ರಮಗಳನ್ನು ಯೋಜನಾಬದ್ಧವಾಗಿ ರೂಪಿಸುವ ಕುರಿತು ಸದಸ್ಯರಿಗೆ ಮಾರ್ಗದರ್ಶನ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಅಧ್ಯಕ್ಷೆ ಶ್ರೀಮತಿ ಮಂಜುಳಾ ಅಕ್ಕಿ ಮಾತನಾಡಿ, ಪಿ.ಡಿ.ಸಿ. ಪ್ರೇಮಾ ಗುಳಗೌಡರ ಮಾರ್ಗದರ್ಶನವು ಕ್ಲಬ್‌ನ ಮುಂದಿನ ಕಾರ್ಯಚಟುವಟಿಕೆಗಳಿಗೆ ಸಹಕಾರಿಯಾಗಲಿದೆ. ಸದಸ್ಯರ ಸಹಕಾರದೊಂದಿಗೆ ಇನ್ನರ್ ವೀಲ್‌ನ ಸೇವೆ ಮತ್ತು ಸ್ನೇಹದ ಧ್ಯೇಯಗಳನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಮುಂದುವರಿಸಲಾಗುವುದು ಎಂದರು.

ಸಭೆಯಲ್ಲಿ ಮಾಜಿ ಅಧ್ಯಕ್ಷರು, ಆಡಳಿತ ಮಂಡಳಿ ಸದಸ್ಯರು ಹಾಗೂ ಸರ್ವಸದಸ್ಯರು ಉಪಸ್ಥಿತರಿದ್ದರು.

---

## ಬೆತ್ತದ ಅಜ್ಜನವರ ದೂರದೃಷ್ಟಿಗೆ ಶಿಕ್ಷಣ ಸಂಸ್ಥೆಗಳೇ ಸಾಕ್ಷಿ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಗ್ರಾಮೀಣ ಭಾಗದಲ್ಲಿ ಶಿಕ್ಷಣದ ಜತೆಗೆ ಸಂಸ್ಕಾರ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವ ಕಾರ್ಯವನ್ನು ಅನ್ನದಾನೇಶ್ವರ ಶಿಕ್ಷಣ ಸಂಸ್ಥೆಗಳು ಮಾಡುತ್ತಿವೆ. ಸ್ವಾತಂತ್ರ್ಯ ಪೂರ್ವದಲ್ಲಿಯೇ ಬೆತ್ತದ ಅಜ್ಜನವರು ಇಲ್ಲಿ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿರುವುದು ಅವರ ದೂರದೃಷ್ಟಿಗೆ ಸಾಕ್ಷಿಯಾಗಿದೆ ಎಂದು ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಡಿ.ವಿ. ಪರಮಶಿವಮೂರ್ತಿ ಹೇಳಿದರು.

ಶ್ರೀ ಅನ್ನದಾನೇಶ್ವರ ಪದವಿ ಮಹಾವಿದ್ಯಾಲಯ ಹಾಗೂ ವಸತಿ ನಿಲಯಕ್ಕೆ ಭೇಟಿ ನೀಡಿ, ಮಹಾವಿದ್ಯಾಲಯದ ವತಿಯಿಂದ ನೀಡಲಾದ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು. ಗ್ರಾಮೀಣ ಪ್ರದೇಶದಲ್ಲಿರುವ ಅನ್ನದಾನೇಶ್ವರ ಶಿಕ್ಷಣ ಸಂಸ್ಥೆ ಗ್ರಾಮೀಣ ವಿಶ್ವವಿದ್ಯಾಲಯದಂತೆ ಕಂಗೊಳಿಸುತ್ತಿರುವುದು ಸಂತಸ ತಂದಿದೆ. ವಿದ್ಯಾರ್ಥಿಗಳ ಶ್ರೇಯೋಭಿವೃದ್ಧಿಗಾಗಿ ಪ್ರಾಧ್ಯಾಪಕರು ಸದಾ ಶ್ರಮಿಸಬೇಕು. ಶಿಕ್ಷಣದ ಜತೆಗೆ ವಿದ್ಯಾರ್ಥಿಗಳಲ್ಲಿ ಸಂಸ್ಕಾರ, ಮಾನವೀಯತೆ ಹಾಗೂ ಮೌಲ್ಯಗಳನ್ನು ಬೆಳೆಸುವ ಜವಾಬ್ದಾರಿಯನ್ನೂ ನಿರ್ವಹಿಸಬೇಕು ಎಂದು ಸಲಹೆ ನೀಡಿದರು. ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ ಅವರು ಅನ್ನದಾನೇಶ್ವರ ಶಿಕ್ಷಣ ಸಂಸ್ಥೆಯ ಇತಿಹಾಸ ಹಾಗೂ ಹಲವು ವರ್ಷಗಳಿಂದ ನಡೆಸಿಕೊಂಡು ಬರುತ್ತಿರುವ ಶೈಕ್ಷಣಿಕ ಸೇವೆಯ ಕುರಿತು ಕುಲಪತಿಗಳಿಗೆ ವಿವರಿಸಿದರು. ಬೆತ್ತದ ಅಜ್ಜನವರು ಈ ಶಿಕ್ಷಣ ಸಂಸ್ಥೆಗಳನ್ನು ಆರಂಭಿಸದೇ ಹೋಗಿದ್ದರೆ ಗ್ರಾಮೀಣ ಭಾಗದ ಅದೆಷ್ಟೋ ಜನರು ಶಿಕ್ಷಣದಿಂದ ವಂಚಿತರಾಗಿ ತೊಂದರೆ ಅನುಭವಿಸಬೇಕಾಗುತ್ತಿತ್ತು ಎಂದು ಹೇಳಿದರು.

ಪ್ರಾಚಾರ್ಯ ಡಾ. ಕಲ್ಲಯ್ಯ ಹಿರೇಮಠ ಅವರು ಕುಲಪತಿಗಳನ್ನು ಸ್ವಾಗತಿಸಿ, ಮಹಾವಿದ್ಯಾಲಯದ ವಿವಿಧ ವಿಭಾಗಗಳು ಹಾಗೂ ಶೈಕ್ಷಣಿಕ ಚಟುವಟಿಕೆಗಳ ಪರಿಚಯ ಮಾಡಿಕೊಟ್ಟರು. ಕಾಲೇಜು ಆಡಳಿತ ಮಂಡಳಿ ಅಧ್ಯಕ್ಷ ಡಾ. ಎಸ್.ಎ. ಪಾಟೀಲ ಅವರು ಸಂಸ್ಥೆಯ ಪರವಾಗಿ ಕುಲಪತಿ ಡಿ.ವಿ. ಪರಮಶಿವಮೂರ್ತಿ ಅವರನ್ನು ಸನ್ಮಾನಿಸಿದರು.

ನಿವೃತ್ತ ಪ್ರಾಚಾರ್ಯ ಎಸ್.ಜಿ. ಕೇಶಣ್ಣವರ ಅವರು ಕಾಲೇಜಿನಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗಾಗಿ ಕೈಗೊಳ್ಳುತ್ತಿರುವ ಕ್ರಮಗಳು ಹಾಗೂ ವಿದ್ಯಾರ್ಥಿಗಳ ಬಗ್ಗೆ ಸಂಸ್ಥೆ ವಹಿಸುತ್ತಿರುವ ಕಾಳಜಿಯ ಕುರಿತು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಕುಲಪತಿಗಳ ಆಪ್ತ ಸಹಾಯಕ ಕೃಪಾಶಂಕರ, ಪ್ರಾಧ್ಯಾಪಕ ಪುಂಡಲೀಕ ಮಾದರ, ಡಾ. ಡಿ.ಎಲ್. ಪವಾರ ಸೇರಿದಂತೆ ಪ್ರಾಧ್ಯಾಪಕರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿಗಳು

# ತಂಬಾಕಿಗೆ ನೋ' ಹೇಳಿ; ಉಜ್ವಲ ಭವಿಷ್ಯ ಕಟ್ಟಿಕೊಳ್ಳಿ



**ವಿಜಯಸಾಕ್ಷಿ ಸುದ್ದಿ, ರೋಣ**

ಇಂದಿನ ಉತ್ತಮ ನಿರ್ಧಾರವೇ ನಾಳೆಯ ಉಜ್ವಲ ಭವಿಷ್ಯಕ್ಕೆ ಅಡಿಪಾಯವಾಗಿದ್ದು, ವಿದ್ಯಾರ್ಥಿಗಳು ದೈಹಿಕ ಹಾಗೂ ಮಾನಸಿಕ ಆರೋಗ್ಯದ ದೃಷ್ಟಿಯಿಂದ ತಂಬಾಕು ಮುಕ್ತ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು ಎಂದು ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಡಿ. ಬೆನ್ನೂರ ಕರೆ ನೀಡಿದರು.

ರೋಣ ತಾಲೂಕಿನ ಅಬ್ಬಿಗೇರಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಐಇಸಿ ವಿಭಾಗ ಹಾಗೂ ಅಬ್ಬಿಗೇರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆಶ್ರಯದಲ್ಲಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗಾಗಿ ಹಮ್ಮಿಕೊಂಡಿದ್ದ ತಂಬಾಕು ಸೇವನೆ ಆರೋಗ್ಯಕ್ಕೆ ಹಾನಿಕಾರಕ' ವಿಷಯದ ಅರಿವು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರತಿ ವರ್ಷ ವಿಶ್ವದಾದ್ಯಂತ ಲಕ್ಷಾಂತರ ಜನರು ತಂಬಾಕು ಉತ್ಪನ್ನಗಳ ನೇರ ಹಾಗೂ ಪರೋಕ್ಷ ಬಳಕೆಯಿಂದ ಆರೋಗ್ಯ ಸಮಸ್ಯೆಗಳಿಗೆ ಒಳಗಾಗುತ್ತಿದ್ದಾರೆ. ತಂಬಾಕು ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ನಿರಂತರ ಜಾಗೃತಿ ಮೂಡಿಸುವ ಅಗತ್ಯವಿದ್ದು, ಈ ಮಹತ್ವದ ಕಾರ್ಯದಲ್ಲಿ ವಿದ್ಯಾರ್ಥಿಗಳೂ ಕೈಜೋಡಿಸಬೇಕು ಎಂದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಅಜಯಕುಮಾರ ಕಲಾಲ್ ಮಾತನಾಡಿ, ವಿದ್ಯಾರ್ಥಿಗಳು ವಿದ್ಯಾಭ್ಯಾಸಕ್ಕೆ ಮೊದಲ ಆದ್ಯತೆ ನೀಡಬೇಕು.

ಆರೋಗ್ಯಕ್ಕೆ ಹಾನಿಕಾರಕವಾದ ದುಶ್ಚಟಗಳಿಂದ ದೂರವಿದ್ದು ಉತ್ತಮ ಪ್ರಜೆಗಳಾಗಿ ರೂಪುಗೊಳ್ಳಬೇಕು ಎಂದು ಸಲಹೆ ನೀಡಿದರು.

ತಂಬಾಕು ಉತ್ಪನ್ನಗಳ ನಿಷೇಧ ಕಾಯ್ದೆ2003ರ ಕುರಿತು ಮಾಹಿತಿ ನೀಡಿದ ಅವರು, ತಂಬಾಕು ವ್ಯಸನದಿಂದ ಹೊರಬರಲು ಜಿಲ್ಲಾ ತಂಬಾಕು ವ್ಯಸನ ಮುಕ್ತ ಕೇಂದ್ರದಲ್ಲಿ ಲಭ್ಯವಿರುವ ಸೇವಾ ಸೌಲಭ್ಯಗಳ ಬಗ್ಗೆಯೂ ವಿದ್ಯಾರ್ಥಿಗಳಿಗೆ ತಿಳಿಸಿದರು.

ಶಾಲಾ ಮುಖ್ಯ ಶಿಕ್ಷಕ ರಾಮು ಚವ್ಹಾಣ, ಆರೋಗ್ಯ ನಿರೀಕ್ಷಣಾಧಿಕಾರಿ ಎನ್.ಸಿ. ಜೋಷಿ, ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಮನೋರಮಾ ಕಾಲೇಜಿನಲ್ಲಿ ಗ್ರೀಟಿಂಗ್ ಕಾರ್ಡ್ ತಯಾರಿ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಪ್ರತಿಷ್ಠಿತ ಮನೋರಮಾ ಸ್ವತಂತ್ರ ಪದವಿಪೂರ್ವ ಕಾಲೇಜಿನಲ್ಲಿ ವಿದ್ಯಾರ್ಥಿನಿಯರಿಗಾಗಿ ಗ್ರೀಟಿಂಗ್ ಕಾರ್ಡ್ ತಯಾರಿಕಾ ಚಟುವಟಿಕೆ ಕಾರ್ಯಾಗಾರ ಆಯೋಜಿಸಲಾಗಿತ್ತು.

ಕಾರ್ಯಾಗಾರದಲ್ಲಿ ಕಾಲೇಜಿನ ಪ್ರತಿಭಾನ್ವಿತ ವಿದ್ಯಾರ್ಥಿನಿಯರು ಉತ್ಸಾಹದಿಂದ ಪಾಲ್ಗೊಂಡು, ತಮ್ಮ ಸೃಜನಶೀಲತೆ ಹಾಗೂ ಕಲಾತ್ಮಕ ಪ್ರತಿಭೆಯನ್ನು ಬಳಸಿ ಆಕರ್ಷಕ ಗ್ರೀಟಿಂಗ್ ಕಾರ್ಡ್‌ಗಳನ್ನು ತಯಾರಿಸಿದರು. ಪರಸ್ಪರ ಶುಭಾಶಯಗಳನ್ನು ಹಂಚಿಕೊಳ್ಳುವ ಮೂಲಕ ವಿದ್ಯಾರ್ಥಿನಿಯರು ಸಂಭ್ರಮಿಸಿದರು.

ಪಿಯುಸಿ ಸಂಯೋಜಕಿ ಶಾಹೀದಾ ಶಿರಹಟ್ಟಿ ಅವರು ವಿದ್ಯಾರ್ಥಿಗಳು ಪಠ್ಯದ ಜತೆಗೆ ಪಠ್ಯೇತರ ಚಟುವಟಿಕೆಗಳಲ್ಲೂ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಇಂತಹ ಚಟುವಟಿಕೆಗಳು ವಿದ್ಯಾರ್ಥಿಗಳಲ್ಲಿರುವ ಪ್ರತಿಭೆಯನ್ನು ಹೊರತರುವ ಜತೆಗೆ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತವೆ ಎಂದು ಮಾರ್ಗದರ್ಶನ ನೀಡಿದರು.

ಕಾರ್ಯಾಗಾರದಲ್ಲಿ ತಯಾರಿಸಲಾದ ಗ್ರೀಟಿಂಗ್ ಕಾರ್ಡ್‌ಗಳ ಮೌಲ್ಯಮಾಪನವನ್ನು ಕಾಲೇಜಿನ ಕನ್ನಡ ಉಪನ್ಯಾಸಕ ಸಂಗಮೇಶ ಹಾದಿಮನಿ ಹಾಗೂ ಗ್ರಂಥಪಾಲಕ ಹರೀಶ ಬಾರಕೇರ ನಿರ್ಣಾಯಕರಾಗಿ ನೆರವೇರಿಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ ಎನ್.ಎಂ. ಕುಡತರ್ಕರ್, ಕಾರ್ಯದರ್ಶಿ ಮಂಜುನಾಥ ಕುಡತರ್ಕರ್, ಪ್ರಾಚಾರ್ಯ ಬಿ.ಎಸ್. ಹಿರೇಮಠ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ನಿರ್ದೇಶಕರಾದ ಸಂಜಯ ಕುಡತರ್ಕರ್, ಚೇತನ ಕುಡತರ್ಕರ್ ಹಾಗೂ ಸಿಬ್ಬಂದಿ ವರ್ಗದವರು ವಿದ್ಯಾರ್ಥಿನಿಯರ ಪ್ರತಿಭೆಯನ್ನು ಅಭಿನಂದಿಸಿದರು.

### ಆ.18ರಿಂದ ಅಹೋರಾತ್ರಿ ಹೋರಾಟ | ರಸ್ತೆ, ಪರಿಸರ, ರೈತರ ಹಕ್ಕುಗಳಿಗಾಗಿ 100ಕ್ಕೂ ಹೆಚ್ಚು ಸಂಘಟನೆಗಳ ಹೋರಾಟ

# ವಿಂಡ್ ಕಂಪನಿಗಳ ಹಾವಳಿಗೆ ಬ್ರೇಕ್ ಹಾಕಿ

**ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಗಜೇಂದ್ರಗಡರೋಣ ತಾಲೂಕು ವ್ಯಾಪ್ತಿಯಲ್ಲಿ ವಿಂಡ್ ಹಾಗೂ ಸೋಲಾರ್ ಕಂಪನಿಗಳ ಭಾರಿ ವಾಹನಗಳ ಸಂಚಾರದಿಂದ ಗ್ರಾಮೀಣ ರಸ್ತೆಗಳು ಹದಗೆಟ್ಟಿದ್ದು, ರೈತರು ಹಾಗೂ ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದಾರೆ ಎಂದು ಆರೋಪಿಸಿ ಕರ್ನಾಟಕ ಅಭಿವೃದ್ಧಿ ವೇದಿಕೆ ಆ.18ರಿಂದ ಗಜೇಂದ್ರಗಡದಲ್ಲಿ ವಿಂಡ್ ಕಂಪನಿಗಳ ವಾಹನಗಳನ್ನು ತಡೆದು ಅಹೋರಾತ್ರಿ ಹಾಗೂ ಅನಿರ್ದಿಷ್ಟಾವಧಿ ಹೋರಾಟ ನಡೆಸಲು ಮುಂದಾಗಿದೆ.

ಈ ಕುರಿತು ವೇದಿಕೆಯ ಪದಾಧಿಕಾರಿಗಳು ತಹಸೀಲ್ದಾರ್ ಅವರಿಗೆ ಮನವಿ ಸಲ್ಲಿಸಿದರು.

ವೇದಿಕೆಯ ರಾಜ್ಯಾಧ್ಯಕ್ಷ ವಿನಾಯಕ ಜರತಾರಿ ಮಾತನಾಡಿ, ಗಜೇಂದ್ರಗಡರೋಣ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಬಹುರಾಷ್ಟ್ರೀಯ ಪವನ ವಿದ್ಯುತ್ ಕಂಪನಿಗಳು, ಸೋಲಾರ್ ಕಂಪನಿಗಳು ಹಾಗೂ ಆರ್‌ಎಂಸಿ ಕಾಂಕ್ರೀಟ್ ಘಟಕಗಳ ಹಾವಳಿ ಮಿತಿಮೀರಿದೆ ಎಂದು ಆರೋಪಿಸಿದರು.

ವಿಂಡ್ ಕಂಪನಿಗಳ ಅತಿಭಾರದ ಹಾಗೂ ಅತಿಉದ್ದದ ವಾಹನಗಳು ಹಗಲುರಾತ್ರಿ ಗ್ರಾಮೀಣ ರಸ್ತೆಗಳ ಮೂಲಕ ಸಂಚರಿಸುತ್ತಿರುವುದರಿಂದ ರಸ್ತೆಗಳು ಸಂಪೂರ್ಣ ಹದಗೆಟ್ಟು, ತಗ್ಗುಗುಂಡಿಗಳು ನಿರ್ಮಾಣವಾಗಿವೆ. ರೈತರು ಜಮೀನುಗಳಿಗೆ ತೆರಳುವುದಕ್ಕೂ, ಗ್ರಾಮಸ್ಥರು ನಿತ್ಯ ಸಂಚಾರ ನಡೆಸುವುದಕ್ಕೂ ಪರದಾಡುವ ಸ್ಥಿತಿ ನಿರ್ಮಾಣವಾಗಿದೆ ಎಂದರು.

**ಇಬ್ಬ ಹಣದಲ್ಲಿ ರಸ್ತೆಗಳ ಅಭಿವೃದ್ಧಿಗೆ ಆಗ್ರಹ**

ವಿಂಡ್ ಕಂಪನಿಗಳ ವಾಹನ ಸಂಚಾರದಿಂದ ಹದಗೆಟ್ಟಿರುವ ಎಲ್ಲ ಗ್ರಾಮೀಣ ರಸ್ತೆಗಳನ್ನೂ ಕಂಪನಿಗಳ ಸಿಎಸ್‌ಆರ್ ನಿಧಿಯಲ್ಲಿ ದುರಸ್ತಿ ಹಾಗೂ ಅಭಿವೃದ್ಧಿಪಡಿಸಬೇಕು. ಇದಕ್ಕಾಗಿ ಕ್ರಿಯಾ ಯೋಜನೆ ರೂಪಿಸಿ, ಅಂದಾಜು ವೆಚ್ಚ ಹಾಗೂ ಕಾಮಗಾರಿ ಪೂರ್ಣಗೊಳಿಸುವ ಕಾಲಮಿತಿಯನ್ನು ನಿಗದಿಪಡಿಸಬೇಕು. ಕಂಪನಿಗಳು ತಮ್ಮ ಲೆಟರ್ ಹೆಡ್‌ನಲ್ಲಿ ಈ ವಿವರಗಳಿಗೆ ಸಹಿ ಹಾಗೂ ಮುದ್ರೆ ಹಾಕಿ ಜಿಲ್ಲಾಧಿಕಾರಿಗೆ ಸಲ್ಲಿಸುವ ಜತೆಗೆ ಅದರ ಪ್ರತಿಯನ್ನು ಸಾರ್ವಜನಿಕರಿಗೆ ನೀಡಬೇಕು ಎಂದು ಒತ್ತಾಯಿಸಿದರು.

ಈ ಬೇಡಿಕೆ ಈಡೇರುವವರೆಗೆ ವಿಂಡ್ ಕಂಪನಿಗಳ ವಾಹನಗಳಿಗೆ ತಾಲೂಕು ವ್ಯಾಪ್ತಿಯಲ್ಲಿ ಅವಕಾಶ ನೀಡುವುದಿಲ್ಲ ಎಂದು ಎಚ್ಚರಿಸಿದರು.

**ಒಂದು ಲಕ್ಷ ಗಿಡ ನೆಡಲು ಬೇಡಿಕೆ**

ವಿಂಡ್ ಕಂಪನಿಗಳ ಕಾಮಗಾರಿಯಿಂದ ಹಾನಿಗೊಳಗಾಗಿರುವ ಪರಿಸರವನ್ನು ಮರುಸ್ಥಾಪಿಸಬೇಕು.

ಕಡಿದಿರುವ ಗಿಡಮರಗಳ ಬದಲಿಗೆ ಗಜೇಂದ್ರಗಡರೋಣ ತಾಲೂಕುಗಳಲ್ಲಿ ಒಂದು ಲಕ್ಷ ಗಿಡಗಳನ್ನು ನೆಟ್ಟು, 10 ವರ್ಷಗಳ ಕಾಲ ಅವುಗಳ ಸಂರಕ್ಷಣೆ ಜವಾಬ್ದಾರಿಯನ್ನು ಕಂಪನಿಗಳೇ ವಹಿಸಬೇಕು ಎಂದು ಆಗ್ರಹಿಸಿದರು.

ಗಿಡಗಳ ರಕ್ಷಣೆ ಹಾಗೂ ಪೋಷಣೆಗಾಗಿ 100ಕ್ಕೂ ಹೆಚ್ಚು ಸ್ಥಳೀಯರನ್ನು 10 ವರ್ಷಗಳ ಅವಧಿಗೆ ನೇಮಿಸಿ, ಪ್ರತಿ ಕಾರ್ಮಿಕರಿಗೆ ತಿಂಗಳಿಗೆ ₹30 ಸಾವಿರ ವೇತನ ನೀಡಬೇಕು ಎಂಬ ಬೇಡಿಕೆಯನ್ನೂ ಮುಂದಿಟ್ಟರು.

**ಹಳ್ಳಕೊಳ್ಳ, ಚೆಕ್‌ಡ್ಯಾಂ ನಿರ್ಮಾಣಕ್ಕೂ ಒತ್ತಾಯ**

ವಿಂಡ್ ಕಂಪನಿಗಳ ಕಾಮಗಾರಿಯಿಂದ ಹಾನಿಗೊಳಗಾಗಿರುವ ಹಳ್ಳಕೊಳ್ಳ, ಸರುವೆ, ಕಿರುಹಳ್ಳ, ಒಳಗಟ್ಟಿ ಹಾಗೂ ಸೇತುವೆಗಳನ್ನು ಮರುನಿರ್ಮಿಸಬೇಕು. ತಾಲೂಕು ವ್ಯಾಪ್ತಿಯ ಅಗತ್ಯ ಸ್ಥಳಗಳಲ್ಲಿ ಚೆಕ್‌ಡ್ಯಾಂ ಹಾಗೂ ಸೇತುವೆಗಳನ್ನು ನಿರ್ಮಿಸಬೇಕು ಎಂದು ಆಗ್ರಹಿಸಿದರು.

ಇದರ ಜತೆಗೆ ರೈತರ ಜಮೀನಿನಲ್ಲಿ ಉತ್ಪಾದನೆಯಾಗುವ ವಿದ್ಯುತ್‌ನಿಂದ ರೋಣ-ಗಜೇಂದ್ರಗಡ ತಾಲೂಕಿನ ರೈತರ ಹೊಲತೋಟಗಳಿಗೆ ನಿರಂತರವಾಗಿ ಉಚಿತ ತ್ರಿಫೇಸ್ ವಿದ್ಯುತ್ ನೀಡಬೇಕು. ರೈತರ ಜಮೀನಿನಲ್ಲಿ ಅಳವಡಿಸಿರುವ ವಿದ್ಯುತ್ ಘಟಕಗಳಿಂದ ರೈತರಿಗೆ ಶೇರ್ ನೀಡಬೇಕು ಎಂದು ಒತ್ತಾಯಿಸಿದರು.

**ಅಗ್ರಿಮೆಂಟ್ ಕನ್ನಡದಲ್ಲೇ ಇರಲಿ**

ವಿಂಡ್ ಕಂಪನಿಗಳಿಗೆ ಸಂಬಂಧಿಸಿದ ವ್ಯವಹಾರ ಹಾಗೂ ನೋಂದಣಿ ಪ್ರಕ್ರಿಯೆಗಳನ್ನು ಕನ್ನಡದಲ್ಲೇ ನಡೆಸಬೇಕು. ಈಗಾಗಲೇ ಮಾಡಿರುವ ಒಪ್ಪಂದಗಳ ಕನ್ನಡ ಪ್ರತಿಯನ್ನು ರೈತರಿಗೆ ನೀಡಬೇಕು. ಇದರಿಂದ ರೈತರಿಗೆ ಬಾಂಡ್ ಹಾಗೂ ಅಗ್ರಿಮೆಂಟ್‌ನಲ್ಲಿರುವ ಷರತ್ತುಗಳು ಸ್ಪಷ್ಟವಾಗಿ ತಿಳಿಯಲಿವೆ ಎಂದು ವಿನಾಯಕ ಜರತಾರಿ ಹೇಳಿದರು. ಆ.18ರಿಂದ ಆರಂಭವಾಗಲಿರುವ ಹೋರಾಟದಲ್ಲಿ 100ಕ್ಕೂ ಹೆಚ್ಚು ಸಂಘಟನೆಗಳ ಹೋರಾಟಗಾರರು ಭಾಗವಹಿಸಲಿದ್ದಾರೆ ಎಂದು ವೇದಿಕೆ ತಿಳಿಸಿದೆ.

ಲಕ್ಷ್ಮಣ ಬಂಕದ, ಹೂವಾಜಿ ಚಂದೂಕರ, ನೀಲಪ್ಪ ಛಲವಾದಿ, ರಾಘು ಚವ್ಹಾಣ, ಪ್ರಕಾಶ ರಾಠೋಡ, ಚಂದ್ರು ಭೂಷಟ್ಟಿ, ಕುಬೇರ ನಾಯಕ, ಮುತ್ತು ರಾಠೋಡ, ಜೀವನಸಭಾ ಸರ್ಕಾವಾಸ, ಮುತ್ತು ಕಲಾಲ್, ಕುಮಾರ ನಂದಿಕೇಶ್ವರ, ವೀರೇಶ ಮಾಟಲದಿನ್ನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.



> ರೈತರ ಜಮೀನಿನಲ್ಲಿ ವಿದ್ಯುತ್ ಉತ್ಪಾದಿಸಿ ಕಂಪನಿಗಳು ಲಾಭ ಪಡೆಯುತ್ತಿವೆ. ಆದರೆ ಅದೇ ಭಾಗದ ರೈತರು ರಸ್ತೆ, ಪರಿಸರ, ನೀರು ಹಾಗೂ ವಿದ್ಯುತ್ ಸಮಸ್ಯೆ ಎದುರಿಸುವಂತಾಗಬಾರದು. ನಮ್ಮ ಬೇಡಿಕೆಗಳಿಗೆ ಸ್ಪಂದಿಸದಿದ್ದರೆ ಆ.18ರಿಂದ ಅಹೋರಾತ್ರಿ ಹಾಗೂ ಅನಿರ್ದಿಷ್ಟಾವಧಿ ಹೋರಾಟ ನಡೆಸಲಾಗುವುದು.
>
> **- ವಿನಾಯಕ ಜರತಾರಿ,** ರಾಜ್ಯಾಧ್ಯಕ್ಷ, ಕರ್ನಾಟಕ ಅಭಿವೃದ್ಧಿ ವೇದಿಕೆ

### ಗ್ರಾಮೀಣ ಕುಟುಂಬಗಳಿಗೆ ಉದ್ಯೋಗಾವಕಾಶ | ಆ.15ರಿಂದ ಗ್ರಾ.ಪಂ. ಮಟ್ಟದಲ್ಲಿ ವಿಶೇಷ ಅಭಿಯಾನ

# ಜಾಬ್ ಕಾರ್ಡ್ ಮೇಳಕ್ಕೆ ರೋಣ-ಗಜೇಂದ್ರಗಡ ತಾಪಂ ಸಜ್ಜು



**ವಿಜಯಸಾಕ್ಷಿ ಸುದ್ದಿ, ರೋಣ**

ಗ್ರಾಮೀಣ ಪ್ರದೇಶದ ಕುಟುಂಬಗಳಿಗೆ ಸ್ಥಳೀಯವಾಗಿಯೇ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ವಿಕಸಿತ ಭಾರತ G RAM G ಯೋಜನೆಯಡಿ ಜಾಬ್ ಕಾರ್ಡ್ ಮೇಳ ಹಾಗೂ ವಿಶೇಷ ಜಾಗೃತಿ ಅಭಿಯಾನವನ್ನು ಆ.15ರಿಂದ ರೋಣ ಮತ್ತು ಗಜೇಂದ್ರಗಡ ತಾಲೂಕುಗಳ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಹಮ್ಮಿಕೊಳ್ಳಲಾಗುತ್ತಿದೆ ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ. ಕಂದಕೂರ ತಿಳಿಸಿದ್ದಾರೆ.

ತಾಲೂಕು ಪಂಚಾಯಿತಿ ಸಭಾಭವನದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯಾದ್ಯಂತ ಆ.15ರಿಂದ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಜಾಬ್ ಕಾರ್ಡ್ ಮೇಳ ಆಯೋಜಿಸಲಾಗುತ್ತಿದ್ದು, ರೋಣ ಹಾಗೂ ಗಜೇಂದ್ರಗಡ ತಾಲೂಕುಗಳಲ್ಲಿಯೂ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ. ಗ್ರಾಮೀಣ ಕುಟುಂಬಗಳಿಗೆ ಉದ್ಯೋಗ ಕಲ್ಪಿಸುವುದರ ಜತೆಗೆ ಹೆಚ್ಚಿನ ಮಾನವ ದಿನಗಳ ಸೃಷ್ಟಿಗೆ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುವುದು ಎಂದರು.

> ಉದ್ಯೋಗದ ಅವಕಾಶವನ್ನು ಅರ್ಹ ಕುಟುಂಬಗಳ ಮನೆಬಾಗಿಲಿಗೆ ತಲುಪಿಸುವುದು ನಮ್ಮ ಮುಖ್ಯ ಉದ್ದೇಶ. ಜಾಬ್ ಕಾರ್ಡ್, e&KYC ಹಾಗೂ ಉದ್ಯೋಗದ ಬೇಡಿಕೆ ಸಲ್ಲಿಕೆ ಕುರಿತು ಮಾಹಿತಿ ಅಗತ್ಯವಿರುವವರು ತಮ್ಮ ಗ್ರಾಮ ಪಂಚಾಯಿತಿಯನ್ನು ಸಂಪರ್ಕಿಸಬೇಕು. ಜಾಬ್ ಕಾರ್ಡ್ ಮೇಳದ ಸದುಪಯೋಗ ಪಡೆದು ಉದ್ಯೋಗದ ಬೇಡಿಕೆ ಸಲ್ಲಿಸಿ, ಸ್ಥಳೀಯ ಅಭಿವೃದ್ಧಿ ಕಾರ್ಯಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಸಾರ್ವಜನಿಕರಲ್ಲಿ ಮನವಿ ಮಾಡುತ್ತೇನೆ.
>
> **- ಚಂದ್ರಶೇಖರ ಬಿ. ಕಂದಕೂರ,** ಕಾರ್ಯನಿರ್ವಾಹಕ ಅಧಿಕಾರಿ, ತಾಪಂ ರೋಣಗಜೇಂದ್ರಗಡ

**ಜಾಬ್ ಕಾರ್ಡ್ ಪರಿಶೀಲನೆ, ಹೊಸ ಕಾರ್ಡ್‌ಗೆ ಅವಕಾಶ**

ಜಾಬ್ ಕಾರ್ಡ್ ಹೊಂದಿರುವ ಕುಟುಂ ಬಗಳ ಮಾಹಿತಿಯನ್ನು ಪರಿಶೀಲಿಸುವುದು, ಅರ್ಹರಿಗೆ ಹೊಸ ಜಾಬ್ ಕಾರ್ಡ್ ಮಾಡಿಸಿಕೊಡುವುದು, ಹಳೆಯ ಕಾರ್ಡ್ ನವೀಕರಣ, e&KYC ಪೂರ್ಣಗೊಳಿಸುವುದು ಹಾಗೂ ಉದ್ಯೋಗದ ಬೇಡಿಕೆ ಸ್ವೀಕರಿಸುವುದಕ್ಕೆ ಮೇಳದಲ್ಲಿ ಆದ್ಯತೆ ನೀಡಲಾಗುವುದು.

ಉದ್ಯೋಗಕ್ಕಾಗಿ ಅರ್ಜಿ ಸಲ್ಲಿಸುವ ಕುಟುಂಬಗಳಿಗೆ ನಿಯಮಾನುಸಾರ ಸ್ವೀಕೃತಿ ನೀಡುವ ವ್ಯವಸ್ಥೆಯನ್ನೂ ಗ್ರಾಮ ಪಂಚಾಯಿತಿಗಳಲ್ಲಿ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಇದರ ಜತೆಗೆ ಮನೆ-ಮನೆಗೆ ಭೇಟಿ ನೀಡಿ ಯೋಜನೆಯ ಕುರಿತು ಮಾಹಿತಿ ನೀಡುವುದು, ಗ್ರಾಮಮಟ್ಟದಲ್ಲಿ ಸಭೆ ನಡೆಸುವುದು, ಪೋಸ್ಟರ್‌ಬ್ಯಾನರ್‌ಗಳ ಮೂಲಕ ಜಾಗೃತಿ ಮೂಡಿಸುವುದು ಹಾಗೂ ಮೇಳದ ಕುರಿತು ವ್ಯಾಪಕ ಪ್ರಚಾರ ಕೈಗೊಳ್ಳಲು ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಸೂಚಿಸಲಾಗಿದೆ ಎಂದರು.

ಕಾರ್ಮಿಕರ ಹಾಜರಾತಿ, ಕಾಮಗಾರಿಗಳ ಪ್ರಗತಿ ಹಾಗೂ ಸಂಬಂಧಿತ ದಾಖಲೆಗಳನ್ನು ಡಿಜಿಟಲ್ ವ್ಯವಸ್ಥೆಯ ಮೂಲಕ ನಿರ್ವಹಿಸಲು ಒತ್ತು ನೀಡಲಾಗುತ್ತಿದೆ.

ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸಂಬಂಧಿತ ಕಾರ್ಯಕರ್ತರು ಸಮನ್ವಯದಿಂದ ಕಾರ್ಯನಿರ್ವಹಿಸಿ ಅರ್ಹ ಕುಟುಂಬಗಳಿಗೆ ಯೋಜನೆಯ ಸೌಲಭ್ಯ ತಲುಪಿಸುವಂತೆ ಕ್ರಮ ಕೈಗೊಳ್ಳಲಾಗಿದೆ ಎಂದರು.

# ಬೆಣ್ಣಿಕಲ್ಲಿನಲ್ಲಿ ನಾಲ್ಕು ದಿಕ್ಕಿನ ಕರಗಲ್ಲುಗಳಿಗೆ ವಿಶೇಷ ಪೂಜೆ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ಬೆಣ್ಣಿಕಲ್ಲು ಗ್ರಾಮದಲ್ಲಿ ನಾಗರ ಅಮಾವಾಸ್ಯೆ ಅಂಗವಾಗಿ ಗ್ರಾಮಸ್ಥರು ಹಿಂದಿನಿಂದಲೂ ನಡೆದುಕೊಂಡು ಬಂದಿರುವ ಸಂಪ್ರದಾಯದಂತೆ ಊರಿನ ನಾಲ್ಕು ದಿಕ್ಕುಗಳಲ್ಲಿರುವ ಕರಗಲ್ಲುಗಳಿಗೆ ವಿಶೇಷ ಪೂಜೆ ನೆರವೇರಿಸಿದರು.

ಗ್ರಾಮದ ಸಮಸ್ತ ದೈವಸ್ಥರು ಒಗ್ಗೂಡಿ ವಿಧಿವಿಧಾನಗಳೊಂದಿಗೆ ಕರಗಲ್ಲುಗಳಿಗೆ ಪೂಜೆ ಸಲ್ಲಿಸಿ, ಸಂಪ್ರದಾಯವನ್ನು ಮುಂದುವರಿಸಿದರು. ನಾಗರ ಅಮಾವಾಸ್ಯೆಯ ಸಂದರ್ಭದಲ್ಲಿ ನಡೆಯುವ ಈ ಪೂಜಾ ಕಾರ್ಯಕ್ರಮದಲ್ಲಿ ಗ್ರಾಮಸ್ಥರು ಭಕ್ತಿಶ್ರದ್ಧೆಯಿಂದ ಪಾಲ್ಗೊಂಡರು.

ಗ್ರಾಮದ ಹಿರಿಯರಾದ ಬಿ.ಎಂ. ಗುರುನಾಥಸ್ವಾಮಿ, ಬಿ.ಎಚ್.ಎಂ. ಅಜ್ಜಯ್ಯ, ಪೂಜಾರ್ ತಿಂದಪ್ಪ, ಬಣಕಾರ್ ತಡಬಿ ಶರಣಪ್ಪ, ಬಿ.ಆರ್. ಬಸವನಗೌಡ ಸೇರಿದಂತೆ ಗ್ರಾಮದ ದೈವಸ್ಥರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಮಾಗಡಿಯಲ್ಲಿ ಉಚಿತ ಆರೋಗ್ಯ ತಪಾಸಣೆ

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ತಾಲೂಕಿನ ಮಾಗಡಿ ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ (ರಿ.), ಶಿರಹಟ್ಟಿಲಕ್ಷ್ಮೇಶ್ವರ ತಾಲೂಕು ಹಾಗೂ ನ್ಯಾಷನಲ್ ಮೆಡಿಕಲ್ ಆರ್ಗನೈಸೇಷನ್ , ಗದಗ ಇವರ ಸಹಯೋಗದಲ್ಲಿ ಸೋಮವಾರ (ಆ.10) ಉಚಿತ ಆರೋಗ್ಯ ತಪಾಸಣಾ ಶಿಬಿರ ನಡೆಯಿತು. ಪರಮಪೂಜ್ಯ ಡಾ. ಡಿ. ವೀರೇಂದ್ರ ಹೆಗ್ಗಡೆ ಹಾಗೂ ಮಾತೋಶ್ರೀ ಹೇಮಾವತಿ ಹೆಗ್ಗಡೆ ಅವರ ಮಾರ್ಗದರ್ಶನದಲ್ಲಿ ಆಯೋಜಿಸಿದ್ದ ಶಿಬಿರದಲ್ಲಿ ಡಾ. ಪ್ರಕಾಶ ಹೊಸಮನಿ ಅವರ ವೈದ್ಯಕೀಯ ತಂಡ ಗ್ರಾಮಸ್ಥರಿಗೆ ಆರೋಗ್ಯ ತಪಾಸಣೆ ನಡೆಸಿತು.


ಶಿಬಿರದಲ್ಲಿ ಇ.ಸಿ.ಜಿ., ರಕ್ತ ತಪಾಸಣೆ ಸೇರಿದಂತೆ ವಿವಿಧ ವೈದ್ಯಕೀಯ ಪರೀಕ್ಷೆಗಳನ್ನು ಉಚಿತವಾಗಿ ನಡೆಸಲಾಯಿತು. ತಪಾಸಣೆಯ ಬಳಿಕ ಅಗತ್ಯವಿರುವವರಿಗೆ ಉಚಿತ ಔಷಧಗಳನ್ನು ವಿತರಿಸಲಾಯಿತು. ಗ್ರಾಮೀಣ ಭಾಗದ ಜನರಿಗೆ ಆರೋಗ್ಯದ ಕುರಿತು ಜಾಗೃತಿ ಮೂಡಿಸುವ ಜತೆಗೆ, ಸರ್ಕಾರಿ ಆಸ್ಪತ್ರೆಗಳಲ್ಲಿರುವ ವೈದ್ಯಕೀಯ ಸೇವೆಗಳನ್ನು ಸದುಪಯೋಗಪಡಿಸಿಕೊಳ್ಳುವ ಕುರಿತು ಮಾಹಿತಿ ನೀಡಲಾಯಿತು.

ಶಿಬಿರದಲ್ಲಿ ಗ್ರಾಮದ ಹಿರಿಯರು ಹಾಗೂ ಶಿರಹಟ್ಟಿ ಗ್ಯಾರಂಟಿ ಸಮಿತಿ ಅಧ್ಯಕ್ಷ ವೀರಯ್ಯ ಮಠಪತಿ, ಗ್ರಾಮ ಪಂಚಾಯಿತಿ ಪಿಡಿಒ ಕುಂಬಾರ, ಎಸ್‌ಕೆಡಿಆರ್‌ಡಿಪಿ ಪ್ರತಿನಿಧಿ ಪುನೀತ್ ಓಲೇಕಾರ, ಗೌರಮ್ಮ ಮುದಕವಿ, ಗಂಗೋತ್ರಿ, ಸ್ಥಳೀಯ ಸೇವಾ ಪ್ರತಿನಿಧಿಗಳು, ಆಶಾ ಕಾರ್ಯಕರ್ತೆಯರು ಹಾಗೂ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

ಗ್ರಾಮೀಣ ಜನರಿಗೆ ಅಗತ್ಯ ವೈದ್ಯಕೀಯ ತಪಾಸಣೆ ಹಾಗೂ ಔಷಧೋಪಚಾರವನ್ನು ಉಚಿತವಾಗಿ ಒದಗಿಸಿದ ಶಿಬಿರಕ್ಕೆ ಗ್ರಾಮಸ್ಥರು ಮೆಚ್ಚುಗೆ ವ್ಯಕ್ತಪಡಿಸಿದರು.

### ಜನಪದ ಕಲೆಯ ಉಳಿವಿಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು: ಡಾ. ರಾಜೇಂದ್ರ ಗಡಾದ

# ಜನಮನಸೂರೆಗೊಂಡ ಶ್ರೀದೇವಿ ಮಹಾತ್ಮೆ ದೊಡ್ಡಾಟ!



**ವಿಜಯಸಾಕ್ಷಿ ಸುದ್ದಿ, ಗದಗ**

ಉತ್ತರ ಕರ್ನಾಟಕದ ಜನಪದ ರಂಗಕಲೆಯ ವೈಶಿಷ್ಟ್ಯವನ್ನು ಸಾರುವ ಶ್ರೀದೇವಿ ಮಹಾತ್ಮೆ' ದೊಡ್ಡಾಟ ಪ್ರದರ್ಶನ ಕಲಾಪ್ರೇಮಿಗಳ ಮನಸೂರೆಗೊಂಡಿತು.

ಮುಳಗುಂದ ನಾಕಾ ಬಳಿಯ ಶ್ರೀ ಅಡವೀಂದ್ರಸ್ವಾಮಿ ಮಠದಲ್ಲಿ ಬೆಟಗೇರಿಯ ಬಿ.ಬಿ. ಬಣ್ಣದ ಜನಪದ ಕಲಾ ಮೇಳ, ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ, ಬೆಂಗಳೂರು ಹಾಗೂ ಶ್ರೀ ಅಡವೀಂದ್ರಸ್ವಾಮಿ ಮಠದ ಶಿವಾನುಭವ ಸಮಿತಿ ಸಹಯೋಗದಲ್ಲಿ ಆಯೋಜಿಸಿದ್ದ ದೊಡ್ಡಾಟ ಪ್ರದರ್ಶನಕ್ಕೆ ಗದಗ ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ ಅಧ್ಯಕ್ಷ, ಸಾಹಿತಿ ಹಾಗೂ ಸಂಶೋಧಕ ಡಾ. ರಾಜೇಂದ್ರ ಎಸ್. ಗಡಾದ ಮದ್ದಳೆ ಬಾರಿಸುವ ಮೂಲಕ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ದೊಡ್ಡಾಟ, ಸಣ್ಣಾಟ, ತೊಗಲುಗೊಂಬೆಯಾಟ ಸೇರಿದಂತೆ ಜನಪದ ಕಲೆಗಳು ನಮ್ಮ ಸಾಂಸ್ಕೃತಿಕ ಪರಂಪರೆಯ ಜೀವಂತ ಪ್ರತೀಕಗಳಾಗಿವೆ. ಜನಪದೀಯರು ಆತ್ಮೀಯತೆ, ನಂಬಿಕೆ ಹಾಗೂ ಭಾವನಾತ್ಮಕತೆಯಿಂದ ಇವುಗಳನ್ನು ತಲೆಮಾರಿನಿಂದ ತಲೆಮಾರಿಗೆ ಉಳಿಸಿಕೊಂಡು ಬಂದಿದ್ದಾರೆ ಎಂದರು.

ಜಾಗತೀಕರಣ, ನಗರೀಕರಣ ಹಾಗೂ ಕೈಗಾರೀಕರಣದ ಪರಿಣಾಮ ಅನೇಕ ಜನಪದ ಕಲೆಗಳು ನಶಿಸುವ ಹಂತದಲ್ಲಿವೆ. ಕಲಾತಂಡಗಳು ಹಾಗೂ ಕಲಾವಿದರ ಸಂಖ್ಯೆಯೂ ಕಡಿಮೆಯಾಗುತ್ತಿದೆ. ಇಂತಹ ಸಂದರ್ಭದಲ್ಲಿ ಕಲಾವಿದರನ್ನು ಪ್ರೋತ್ಸಾಹಿಸಿ, ಕಲಾತಂಡಗಳಿಗೆ ಬೆಂಬಲ ನೀಡುವ ಮೂಲಕ ದೊಡ್ಡಾಟದಂತಹ ಅಪರೂಪದ ಕಲೆಗಳನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಪ್ರತಿಯೊಬ್ಬ ಜನಪದೀಯರದ್ದಾಗಿದೆ ಎಂದು ಹೇಳಿದರು.

ಉತ್ತರ ಕರ್ನಾಟಕದ ಜನಪದರಂಗ ಕಲೆಗಳಲ್ಲಿ ದೊಡ್ಡಾಟವು ವಿಶಿಷ್ಟ ಸ್ಥಾನ ಹೊಂದಿದೆ. ಭವ್ಯ ರಂಗಸಜ್ಜಿಕೆ, ವೀರೋಚಿತ ಕುಣಿತ, ಸಂಗೀತ, ವರ್ಣರಂಜಿತ ವೇಷಭೂಷಣ ಹಾಗೂ ವೀರರೌದ್ರ ಪ್ರಧಾನ ಕಥಾವಸ್ತು ಇದರ ವೈಶಿಷ್ಟ್ಯವಾಗಿದೆ. ಹಿಂದೆ ರಾತ್ರಿಯಿಂದ ಬೆಳಗಿನವರೆಗೆ ನಡೆಯುತ್ತಿದ್ದ ದೊಡ್ಡಾಟಗಳು ಇದೀಗ ಕಾಲಕ್ಕೆ ತಕ್ಕಂತೆ ಸಂಕ್ಷಿಪ್ತ ರೂಪ ಪಡೆದುಕೊಂಡಿರುವುದು ಸ್ವಾಗತಾರ್ಹ. ಯುವ ಪೀಳಿಗೆ ಹಾಗೂ ಮಕ್ಕಳು ಇಂತಹ ಕಲೆಗಳನ್ನು ನೋಡಿ, ಅದರ ಮಹತ್ವ ಅರಿಯಬೇಕು ಎಂದರು.

ಶ್ರೀ ಅಡವೀಂದ್ರಸ್ವಾಮಿ ಮಠದ ದಸರಾ ಮಹೋತ್ಸವ ಸಮಿತಿ ಅಧ್ಯಕ್ಷೆ ಸುವರ್ಣ ಮದರಿಮಠ ಹಾಗೂ ಕಲಾಪೋಷಕ ಶ್ರೀನಿವಾಸ ಹುಬ್ಬಳ್ಳಿ ಮಾತನಾಡಿ, ಗದಗಬೆಟಗೇರಿ ಭಾಗದಲ್ಲಿ ದೊಡ್ಡಾಟದಂತಹ ವಿಶಿಷ್ಟ ರಂಗಕಲೆ ಇನ್ನೂ ಜೀವಂತವಾಗಿರುವುದು ಜಿಲ್ಲೆಯ ಹೆಮ್ಮೆಯ ಸಂಗತಿ. ಇದರ ಉಳಿವಿಗೆ ಎಲ್ಲರೂ ಶ್ರಮಿಸಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಬಿ.ಬಿ. ಬಣ್ಣದ ಜನಪದ ಕಲಾ ಮೇಳದ ಅಧ್ಯಕ್ಷ ಅಶೋಕ ಬಣ್ಣದ ಅವರು ಕಲಾ ಮೇಳ ಬೆಳೆದು ಬಂದ ಹಾದಿ ಹಾಗೂ ಮಠಮಾನ್ಯಗಳ ಸಹಕಾರವನ್ನು ಸ್ಮರಿಸಿದರು. ಶ್ರೀಮಠದ ಧರ್ಮದರ್ಶಿ ವೇ. ಮಹೇಶ್ವರ ಸ್ವಾಮೀಜಿ ಮಾತನಾಡಿ, ಮೈಸೂರು ಅರಸರು ಹಾಗೂ ನಾಡಿನ ಮಠಮಾನ್ಯಗಳು ಜನಪದ ಕಲೆಗಳಿಗೆ ನೀಡಿದ ಪ್ರೋತ್ಸಾಹವನ್ನು ಸ್ಮರಿಸಿದರು. ಜನಪದ ಕಲಾವಿದರನ್ನು ಪ್ರೋತ್ಸಾಹಿಸುವ ಕಾರ್ಯ ನಿರಂತರವಾಗಬೇಕು ಎಂದರು.

ಬಳಿಕ ಬೆಟಗೇರಿಯ ಶ್ರೀರಂಗಪ್ಪ ನಾರಾಯಣಕೇರಿ ಹಾಗೂ ಸಂಗಡಿಗರು ಶ್ರೀದೇವಿ ಮಹಾತ್ಮೆ' ದೊಡ್ಡಾಟವನ್ನು ಮನೋಜ್ಞವಾಗಿ ಪ್ರದರ್ಶಿಸಿ ಕಲಾಪ್ರೇಮಿಗಳ ಮೆಚ್ಚುಗೆಗೆ ಪಾತ್ರರಾದರು. ಅನ್ವಿತಾ ಬಣ್ಣದ ಪ್ರಾರ್ಥಿಸಿದರು. ಜಿ.ಎಂ. ಯಾನಮಶೆಟ್ಟಿ ಸ್ವಾಗತಿಸಿದರು. ಬಿ.ಎಂ. ಬಿಳೆಯಲಿ ದೊಡ್ಡಾಟದ ಕುರಿತು ಅನಿಸಿಕೆ ಹಂಚಿಕೊಂಡರು. ಕಿರಣ ಬಣ್ಣದ ನಿರೂಪಿಸಿದರು. ಗೀತಾ ಹೂಗಾರ ವಂದಿಸಿದರು.

# ಶ್ರಾವಣದ ಸಂಭ್ರಮಕ್ಕೆ ಶಿವನಾಮ ಜಪಯಜ್ಞ

**ವಿಜಯಸಾಕ್ಷಿ ಸುದ್ದಿ, ಗದಗ**

ಶಿವಶರಣೆ ಡಾ. ನೀಲಮ್ಮ ತಾಯಿಯವರ ಅಧ್ಯಕ್ಷತೆಯಲ್ಲಿ ನಗರದ ಆಧ್ಯಾತ್ಮ ವಿದ್ಯಾಶ್ರಮದಲ್ಲಿ ಶ್ರಾವಣದ ನಿಮಿತ್ತ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಆ.13ರಿಂದ ಸೆ.11ರವರೆಗೆ ಪ್ರತಿದಿನ ಬೆಳಿಗ್ಗೆ 6 ಗಂಟೆಗೆ ಶ್ರೀ ಗುರುಗಳಿಗೆ ಹಾಗೂ ಶ್ರೀದೇವಿಗೆ ರುದ್ರಾಭಿಷೇಕ, ಸಹಸ್ರ ಬಿಲ್ವಾರ್ಚನೆ ಮತ್ತು ಸಹಸ್ರನಾಮಾವಳಿ ನಡೆಯಲಿದೆ. ಈ ಧಾರ್ಮಿಕ ಸೇವೆಯನ್ನು ಶಂಕರ ಮಾತಾಡೆ ಅವರು ನಡೆಸಿಕೊಡಲಿದ್ದಾರೆ. ಪ್ರತಿದಿನ ಸಂಜೆ 5ರಿಂದ 6ರವರೆಗೆ ಶಿವನಾಮ ಜಪಯಜ್ಞ ನಡೆಯಲಿದ್ದು, ಶ್ರೀ ಆದಿಶಕ್ತಿ ಬಳಗದ ತಾಯಂದಿರಾದ ಶಾರದಾ ಕಾತರಕಿ, ಲಕ್ಷ್ಮೀ ಮುಳಗುಂದ, ಜ್ಯೋತಿ ರೇಶ್ಮಿ, ಪಾರ್ವತಿ ಹೆಗಡಿಕಟ್ಟಿ, ವಾಣಿ ಕುಷ್ಟಗಿ, ಮಂಗಲ ಮಾನ್ವಿ, ದ್ರಾಕ್ಷಾಯಣಿ ನವಲಗುಂದ, ಶಿವಗಂಗಾ ಬಾಣಾಪುರ, ಪ್ರಭಾವತಿ ಹೊಳೆಯಣ್ಣವರ, ಶೋಭಾ ಪಾಟೀಲ, ಶೈಲಜಾ ಬೆಂಗಳೂರು, ಶೋಭಾ ತೊರಗಲ್ಲ, ಕವಿತಾ ಕುಷ್ಟಗಿ, ಅರುಣಾ ಕುಷ್ಟಗಿ, ನೀಲಕ್ಕ ಹುಲ್ಲೂರ, ವಿಜಯಲಕ್ಷ್ಮೀ ಬಿಂಕದಕಟ್ಟಿ ಹಾಗೂ ಶಿಲ್ಪಾ ಹಿರೇಮಠ ಸೇರಿದಂತೆ ಹಲವರು ಭಾಗವಹಿಸಿ ಜಪಯಜ್ಞ ನಡೆಸಿಕೊಡಲಿದ್ದಾರೆ. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಧಾರ್ಮಿಕ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಆಶ್ರಮದ ಪ್ರಕಟಣೆ ತಿಳಿಸಿದೆ.

### ಖಾಸಗಿ ಕ್ಷೇತ್ರದ ಅವಕಾಶಗಳತ್ತಲೂ ಹೆಜ್ಜೆ ಇಡಿ | ಶಿಕ್ಷಣದ ಜತೆಗೆ ಕ್ರೀಡೆ, ಕೌಶಲ್ಯ ಬೆಳೆಸಿ: ಸ್ನೇಹಲ್

# ಯುವಜನರು ಸರ್ಕಾರಿ ಉದ್ಯೋಗಕ್ಕೆ ಮಾತ್ರ ಸೀಮಿತವಾಗಬಾರದು




**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಯುವಜನರು ಸರ್ಕಾರಿ ಉದ್ಯೋಗವನ್ನೇ ಗುರಿಯಾಗಿಸಿಕೊಳ್ಳದೆ ಖಾಸಗಿ ಕ್ಷೇತ್ರದಲ್ಲಿರುವ ಉದ್ಯೋಗಾವಕಾಶಗಳನ್ನೂ ಬಳಸಿಕೊಳ್ಳಬೇಕು. ಶಾಲಾ ಹಂತದಿಂದಲೇ ವಿದ್ಯಾರ್ಥಿಗಳಲ್ಲಿ ಜೀವನದ ಗುರಿ, ಕೌಶಲ್ಯ ಹಾಗೂ ಕ್ರೀಡಾಸಕ್ತಿಯನ್ನು ಬೆಳೆಸಬೇಕು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಹೇಳಿದರು. ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಭವನದಲ್ಲಿ ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ಜಿಲ್ಲೆಯ ಎಲ್ಲ ಇಲಾಖೆಗಳ ಪ್ರಗತಿ ಕುರಿತು ನಡೆದ ಸಭೆಯಲ್ಲಿ ಅವರು ಮಾತನಾಡಿದರು.

1ರಿಂದ 8ನೇ ತರಗತಿಯ ವಿದ್ಯಾರ್ಥಿಗಳಿಗೆ ಓದುವ ಕೌಶಲ್ಯ ಕಡ್ಡಾಯವಾಗಿ ಬರಬೇಕು. ಒಂದು ಶಾಲೆಒಂದು ಕಲೆಒಂದು ಕ್ರೀಡೆ' ಎಂಬ ಆಶಯದೊಂದಿಗೆ ಅಧಿಕಾರಿಗಳು ಒಗ್ಗೂಡಿ ಕಾರ್ಯನಿರ್ವಹಿಸಬೇಕು ಎಂದರು.

ಸ್ಪರ್ಧಾತ್ಮಕ ಪರೀಕ್ಷೆಗೆ ಸಿದ್ಧತೆ ನಡೆಸುತ್ತಿರುವ ವಿದ್ಯಾರ್ಥಿಗಳು ಒಂದೇ ಸರ್ಕಾರಿ ಉದ್ಯೋಗದ ಹಿಂದೆ ಬೀಳದೆ ಖಾಸಗಿ ಉದ್ಯೋಗಗಳಿಗೂ ಪ್ರಯತ್ನಿಸಬೇಕು. ಸರ್ಕಾರದ ಯೋಜನೆಗಳ ಜತೆಗೆ ಉದ್ಯೋಗಾವಕಾಶಗಳ ಮಾಹಿತಿ ಹಾಗೂ ಪ್ರೇರಣೆ ನೀಡುವ ಕಾರ್ಯ ನಡೆಯಬೇಕು ಎಂದು ಹೇಳಿದರು.

ಜಿಪಂ ಸಿಇಒ ಭುವನೇಶ ಪಾಟೀಲ ಮಾತನಾಡಿ, ಪಿಯುಸಿ ಹಾಗೂ ಪದವಿ ಪೂರ್ಣಗೊಳಿಸಿದ ವಿದ್ಯಾರ್ಥಿಗಳಿಗೆ ಸರ್ಕಾರಿ ಮತ್ತು ಖಾಸಗಿ ಕ್ಷೇತ್ರದ ಉದ್ಯೋಗ, ಸ್ಪರ್ಧಾತ್ಮಕ ಪರೀಕ್ಷಾ ಕೇಂದ್ರಗಳು ಹಾಗೂ ತರಬೇತಿ ಕುರಿತು ಮಾಹಿತಿ ನೀಡಬೇಕು ಎಂದರು.

ಯುವಜನರು ಇಂಟರ್ನೆಟ್ ಅನ್ನು ದುರ್ಬಳಕೆ ಮಾಡದೆ ತಮ್ಮ ಗುರಿ ಸಾಧನೆಗೆ ಬಳಸಿಕೊಳ್ಳಬೇಕು. ಶಾಲಾ-ಕಾಲೇಜುಗಳಲ್ಲಿ ದಿನಪತ್ರಿಕೆ ಓದುವ ಅಭ್ಯಾಸ ಬೆಳೆಸಬೇಕು. ಎಲ್ಲ ಶಾಲಾ-ಕಾಲೇಜುಗಳಲ್ಲಿ ಶೌಚಾಲಯ ಹಾಗೂ ನೀರಿನ ವ್ಯವಸ್ಥೆ ಕಡ್ಡಾಯವಾಗಿರಬೇಕು ಎಂದು ಸೂಚಿಸಿದರು.

ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಮಾತನಾಡಿ, ಶಿಕ್ಷಣದ ಜತೆಗೆ ಕ್ರೀಡೆಗೂ ಆದ್ಯತೆ ನೀಡಬೇಕು. ಕ್ರೀಡೆಯಲ್ಲಿ ಆಸಕ್ತಿ ಹೊಂದಿರುವ ವಿದ್ಯಾರ್ಥಿಗಳನ್ನು ಶಿಕ್ಷಕರು ಗುರುತಿಸಿ ಪ್ರೋತ್ಸಾಹಿಸಬೇಕು. ಶಾಲೆಗಳಲ್ಲಿ ಡಿಜಿಟಲ್ ಕೌಶಲ್ಯ ತರಬೇತಿ ನೀಡಬೇಕು ಹಾಗೂ ಪ್ರೌಢಶಾಲಾ ಹಂತದಿಂದಲೇ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ವಿದ್ಯಾರ್ಥಿಗಳು ಮತ್ತು ಪೋಷಕರಲ್ಲಿ ಅರಿವು ಮೂಡಿಸಬೇಕು ಎಂದರು.

ಪ್ರೊಬೇಷನರಿ ಐಎಎಸ್ ಅಧಿಕಾರಿ ಅನುಪ್ರಿಯಾ ಸಾಕ್ಯಾ, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಪ್ರಾದೇಶಿಕ ಉಪಅರಣ್ಯ ಸಂರಕ್ಷಣಾಧಿಕಾರಿ ಶೇಕ್ ಅಲಿಂ ಸಿದ್ದಿಕ್ಕಿ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

> **ಪ್ರತಿಯೊಬ್ಬ ಮಗುವಿಗೂ ಶಿಕ್ಷಣದ ಜತೆಗೆ ಕ್ರೀಡೆ ಹಾಗೂ ಜೀವನದ ಗುರಿಯ ಅರಿವು ಮೂಡಿಸಬೇಕು. ಅಧಿಕಾರಿಗಳು ಒಂದೊಂದು ಶಾಲೆ ಅಥವಾ ವಸತಿ ನಿಲಯವನ್ನು ದತ್ತು ಪಡೆದು ತಿಂಗಳಲ್ಲಿ ಒಂದು ದಿನ ಭೇಟಿ ನೀಡಿ ಅಲ್ಲಿನ ಸಮಸ್ಯೆಗಳನ್ನು ಅರಿತು ಪರಿಹರಿಸಬೇಕು. ವಿದ್ಯಾರ್ಥಿಗಳಿಗೆ ವಿವಿಧ ಉದ್ಯೋಗಾವಕಾಶಗಳ ಕುರಿತು ಜಾಗೃತಿ ಮೂಡಿಸಬೇಕು.**
> **- ಸ್ನೇಹಲ್ ಆರ್.**, ಜಿಲ್ಲಾಧಿಕಾರಿ

# ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವ ಕಾರ್ಯಕ್ರಮ



**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಹುಲಕೋಟಿಯ ಶ್ರೀ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆ.13ರಂದು ಪದವಿ ವಿದ್ಯಾರ್ಥಿಗಳಿಗೆ ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಲ್ಲೊಂದಾದ ಯುವನಿಧಿ ಯೋಜನೆ ಕುರಿತು ಅರಿವು ಹಾಗೂ ವೃತ್ತಿಮಾರ್ಗದರ್ಶನ ಕಾರ್ಯಕ್ರಮ ನಡೆಯಿತು.

ಗದಗ ಜಿಲ್ಲಾ ಮಟ್ಟದ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ ಹಾಗೂ ಗದಗ ತಾಲೂಕು ಮಟ್ಟದ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಅವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಯುವನಿಧಿ ಯೋಜನೆಯ ಸದುಪಯೋಗ ಪಡೆದುಕೊಂಡು ಭವಿಷ್ಯ ರೂಪಿಸಿಕೊಳ್ಳುವ ಕುರಿತು ಮಾರ್ಗದರ್ಶನ ನೀಡಲಾಯಿತು.

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಅಧಿಕಾರಿಗಳು ಯೋಜನೆಯ ಅರ್ಹತೆ, ನೋಂದಣಿ ಹಾಗೂ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು. 2023ರಿಂದ ಪದವಿ ಅಥವಾ ಡಿಪ್ಲೊಮಾ ಪೂರ್ಣಗೊಳಿಸಿರುವ, ಕನಿಷ್ಠ ಆರು ತಿಂಗಳ ಕಾಲ ಉದ್ಯೋಗವಿಲ್ಲದಿರುವ ಅರ್ಹ ಅಭ್ಯರ್ಥಿಗಳಿಗೆ ಯುವನಿಧಿ ಯೋಜನೆಯಡಿ ನಿರುದ್ಯೋಗ ಭತ್ಯೆ ನೀಡಲಾಗುತ್ತದೆ.

ಪದವೀಧರರಿಗೆ ತಿಂಗಳಿಗೆ ₹3,000 ಹಾಗೂ ಡಿಪ್ಲೊಮಾ ಅಭ್ಯರ್ಥಿಗಳಿಗೆ ₹1,500 ಭತ್ಯೆ ದೊರೆಯಲಿದ್ದು, ಗರಿಷ್ಠ ಎರಡು ವರ್ಷಗಳವರೆಗೆ ಸೌಲಭ್ಯ ಪಡೆಯಬಹುದು. ಅರ್ಹರು ಸೇವಾ ಸಿಂಧು ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು ಎಂದು ತಿಳಿಸಲಾಯಿತು.

ಕಾಲೇಜಿನ ಪ್ರಾಚಾರ್ಯ ಅಪ್ಪಣ್ಣ ಹಂಜಿ, ಸಹಾಯಕ ಉದ್ಯೋಗಾಧಿಕಾರಿ ಎಚ್ಚರಪ್ಪ ಬಡಿಗೇರ, ಆಪ್ತ ಸಮಾಲೋಚಕ ಆನಂದ ಹೊಂಬಳ ಸೇರಿದಂತೆ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿಗಳು

# ಗದಗ ಉತ್ಸವಕ್ಕೆ ಸಿ.ಸಿ. ಪಾಟೀಲರಿಗೆ ಆಹ್ವಾನ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ವತಿಯಿಂದ ಆಯೋಜಿಸಲಾಗಿರುವ ಗದಗ ಉತ್ಸವ2026ಕ್ಕೆ ನರಗುಂದ ಕ್ಷೇತ್ರದ ಶಾಸಕ ಹಾಗೂ ಮಾಜಿ ಸಚಿವ ಸಿ.ಸಿ. ಪಾಟೀಲ ಅವರನ್ನು ಸಂಸ್ಥೆಯ ಪದಾಧಿಕಾರಿಗಳು ಆತ್ಮೀಯವಾಗಿ ಆಹ್ವಾನಿಸಿದರು.

ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಸಂಗಪ್ಪ ಗುಡಿಮನಿ ಅವರ ನೇತೃತ್ವದಲ್ಲಿ ಸಿ.ಸಿ. ಪಾಟೀಲ ಅವರಿಗೆ ಗದಗ ಉತ್ಸವದ ಆಮಂತ್ರಣ ಪತ್ರಿಕೆ ನೀಡಿ, ಉತ್ಸವದಲ್ಲಿ ಭಾಗವಹಿಸಿ ಕಾರ್ಯಕ್ರಮದ ಯಶಸ್ಸಿಗೆ ಶುಭ ಹಾರೈಸುವಂತೆ ಮನವಿ ಮಾಡಲಾಯಿತು.

ಈ ಸಂದರ್ಭದಲ್ಲಿ ಸಂಸ್ಥೆಯ ಕಾರ್ಯದರ್ಶಿ ಚನ್ನವೀರಪ್ಪ ಹುಣಸಿಕಟ್ಟಿ ಹಾಗೂ ಮಾಜಿ ಅಧ್ಯಕ್ಷ ರಾಮನಗೌಡ ದಾನಪ್ಪಗೌಡ್ರ ಉಪಸ್ಥಿತರಿದ್ದರು.

# ಅಣ್ಣಿಗೇರಿಯಲ್ಲಿ ಆ.15ರಿಂದ ಶರಣ ಶ್ರಾವಣ

**ವಿಜಯಸಾಕ್ಷಿ ಸುದ್ದಿ, ಅಣ್ಣಿಗೇರಿ**

ಲಿಂಗೈಕ್ಯ ಡಾ. ತೋಂಟದ ಸಿದ್ದಲಿಂಗ ಸ್ವಾಮೀಜಿ ಅವರು ಜೀವಿತಾವಧಿಯಲ್ಲಿ ವಿವಿಧ ಕ್ಷೇತ್ರಗಳಲ್ಲಿ ಮಾಡಿದ ಅಪ್ರತಿಮ ಸಾಧನೆಗಳನ್ನು ಸ್ಮರಿಸುವ ಶರಣ ಶ್ರಾವಣ' ಉಪನ್ಯಾಸ ಮಾಲಿಕೆ ಆ.15ರಿಂದ ಸೆ.5ರವರೆಗೆ ಪಟ್ಟಣದಲ್ಲಿ ನಡೆಯಲಿದೆ.



ಸ್ಥಳೀಯ ಬಸವ ಕೇಂದ್ರ, ಹಾಗೂ ತಾಲೂಕು ಶರಣ ಸಾಹಿತ್ಯ ಪರಿಷತ್ ಯುವ ಘಟಕದ ಆಶ್ರಯದಲ್ಲಿ ಪ್ರತಿ ಶನಿವಾರ ಸಂಜೆ ಪಟ್ಟಣದ ನಿಂಗಮ್ಮ ಹೂಗಾರ ವಿದ್ಯಾಲಯದ ಬಳಿಯ ತೋಂಟದಾರ್ಯ ಪ್ರಸಾದ ನಿಲಯದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ.

ನಾಲ್ಕು ವಾರಗಳ ಕಾಲ ನಡೆಯಲಿರುವ ಉಪನ್ಯಾಸ ಮಾಲಿಕೆಯಲ್ಲಿ ಕ್ರಮವಾಗಿ ಡಾ. ಶಾಂತಾ ಲಕ್ಷ್ಮೇಶ್ವರ, ಸುಮಿತ್ರಾ ಹುಣಸಿಮರದ, ಬಿ.ಡಿ. ನಲವಡಿ ಹಾಗೂ ಎನ್.ಎಸ್. ಮೇಲ್ಮರಿ ಉಪನ್ಯಾಸ ನೀಡಲಿದ್ದಾರೆ.

ಕಾರ್ಯಕ್ರಮಗಳಿಗೆ ಕ್ರಮವಾಗಿ ಮಲ್ಲಿಕಾರ್ಜುನ ಸುರಕೋಡ, ಶಿವಯೋಗಿ ಹುಬ್ಬಳ್ಳಿ, ವೀರೇಶ ಶಾನುಭೋಗರ ಹಾಗೂ ಲಿಂಗರಾಜ ಕುಲಕರ್ಣಿ ಅಧ್ಯಕ್ಷತೆ ವಹಿಸಲಿದ್ದಾರೆ.

ಎಸ್.ವಿ. ಕುರಡಗಿ, ಡಾ. ಸುಧಾ ಕೌಜಗೇರಿ, ಚನ್ನಬಸಮ್ಮ ಹಗೇದಕಟ್ಟಿಮಠ ಹಾಗೂ ಕಿರಣ ಬೂದಿಹಾಳ ಉಪಸ್ಥಿತರಿರುವರು. ದಾಸೋಹ ಸೇವೆಯನ್ನು ಶೋಭಾ ಕುರಡಗಿ, ಕವಿತಾ ಬಿರಸಲ್, ಸಾವಿತ್ರಿ ಹರ್ಲಾಪೂರ, ಅನ್ನಪೂರ್ಣ ಆಕಳವಾಡಿ ಹಾಗೂ ಆದ್ಯಾ ದಿವಟರ ವಹಿಸಿಕೊಂಡಿದ್ದಾರೆ.

ಶರಣ ಸಾಹಿತ್ಯ ಹಾಗೂ ಡಾ. ತೋಂಟದ ಸಿದ್ದಲಿಂಗ ಸ್ವಾಮೀಜಿ ಅವರ ಸಾಧನೆಗಳ ಕುರಿತು ನಡೆಯುವ ಉಪನ್ಯಾಸ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಸಂಘಟಕರು ಮನವಿ ಮಾಡಿದ್ದಾರೆ.

### ಭಗವಂತನ ಒಲುಮೆಗೂ ಸಂಗೀತ ಮಾಧ್ಯಮ: ಪ್ರೀತಿ ಹೊನ್ನಗುಡಿ

# ಸಂಗೀತ ನಮ್ಮ ಸಂಸ್ಕೃತಿಯ ಸಂಕೇತ



**ವಿಜಯಸಾಕ್ಷಿ ಸುದ್ದಿ, ಗದಗ**

ಸಂಗೀತ ಕೇವಲ ಮನರಂಜನೆಗೆ ಸೀಮಿತವಲ್ಲ, ಅದು ನಮ್ಮ ಸಂಸ್ಕೃತಿ ಹಾಗೂ ಭವ್ಯ ಪರಂಪರೆಯ ಸಂಕೇತವಾಗಿದೆ. ಸಂಗೀತ ಮಾನಸಿಕ ನೆಮ್ಮದಿ ನೀಡುವುದರ ಜತೆಗೆ ಭಗವಂತನ ಒಲುಮೆಗೂ ಕಾರಣವಾಗುವ ಮಾಧ್ಯಮವಾಗಿದೆ ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ಮಹಿಳಾ ವಿಭಾಗದ ರಾಜ್ಯ ಸಂಘಟನಾ ಕಾರ್ಯದರ್ಶಿ ಪ್ರೀತಿ ಹೊನ್ನಗುಡಿ ಹೇಳಿದರು.

ಎಸ್.ವಿ.ಟಿ. ಪ್ಯಾರಾ ಮೆಡಿಕಲ್ ಕಾಲೇಜಿನ ಸಭಾಭವನದಲ್ಲಿ ಡಾ. ಪಂ. ಪುಟ್ಟರಾಜ ಸೇವಾ ಸಮಿತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ ಪುಟ್ಟರಾಜ ಸಂಗೀತ ಸಂಭ್ರಮ26' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪುಟ್ಟರಾಜ ಗವಾಯಿಗಳು ಸಂಗೀತದ ಮೂಲಕ ಭಗವಂತನ ಒಲುಮೆ ಪಡೆದು ನಡೆದಾಡುವ, ಮಾತನಾಡುವ ದೇವರು ಎನಿಸಿಕೊಂಡಿದ್ದರು. ವೀರೇಶ್ವರ ಪುಣ್ಯಾಶ್ರಮದ ಮೂಲಕ ಸಂಗೀತ ಸೇವೆ ಸಲ್ಲಿಸಿ ನಮ್ಮ ಭವ್ಯ ಪರಂಪರೆಯನ್ನು ಎತ್ತಿಹಿಡಿದಿದ್ದಾರೆ. ಅವರ ಶಿಷ್ಯಪ್ರಶಿಷ್ಯರು ಗದುಗಿನ ಕೀರ್ತಿಯನ್ನು ದೇಶ-ವಿದೇಶಗಳಲ್ಲಿ ಹೆಚ್ಚಿಸಿದ್ದಾರೆ. ಸಂಗೀತವನ್ನು ಉಳಿಸಿ ಬೆಳೆಸುವ ಕಾರ್ಯಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ಪ್ರೀತಿ ಹೊನ್ನಗುಡಿ ಹೇಳಿದರು.

ಕಾರ್ಯಕ್ರಮವನ್ನು ವನಜಾಕ್ಷಿ ಎಸ್. ತೋಟಗಂಟಿಮಠ ಉದ್ಘಾಟಿಸಿದರು. ಸೇವಾ ಸಮಿತಿ ಅಧ್ಯಕ್ಷ ಪಂ. ಫಕೀರೇಶ್ವರ ಶಾಸ್ತ್ರಿ ಹಿರೇಮಠ ಬೆಳ್ಳಟ್ಟಿ ಅಧ್ಯಕ್ಷತೆ ವಹಿಸಿದ್ದರು. ಎಸ್.ವಿ.ಟಿ. ಅಧ್ಯಕ್ಷ ಡಾ. ಸಂತೋಷ ತೋಟಗಂಟಿಮಠ ಸೇವಾ ಸಮಿತಿಯ ಕಾರ್ಯವನ್ನು ಶ್ಲಾಘಿಸಿದರು.

ಸುಕ್ರುಸಾಬ ಮುಲ್ಲಾ ಹಾರ್ಮೋನಿಯಂ ಸೋಲೋ, ಸಂಜಯಕುಮಾರ ಅರ್ಕಸಾಲಿ ವಯೋಲಿನ್ ಸೋಲೋ, ನಾಗೇಂದ್ರ ಅಕ್ಕಸಾಲಿ ತಬಲಾ ಸೋಲೋ, ಕುಮಾರ ಮಠ ಗುತ್ತರಗಿ ಹಿಂದೂಸ್ತಾನಿ ಗಾಯನ ಹಾಗೂ ಕೃತಿಕಾ ಶರಣಯ್ಯ ಹಿಡ್ಕಿಮಠ ವಚನ ಗಾಯನ ಪ್ರಸ್ತುತಪಡಿಸಿ ಸಂಗೀತಾಸಕ್ತರನ್ನು ರಂಜಿಸಿದರು.

ಈ ಸಂದರ್ಭದಲ್ಲಿ ಕಲಾವಿದರನ್ನು ಸನ್ಮಾನಿಸಿ ಗೌರವಿಸಲಾಯಿತು. ಕಲಾ ವಿಕಾಸ ಪರಿಷತ್ ವತಿಯಿಂದ ಪುಸ್ತಕ ದಾಸೋಹ ಯೋಜನೆಯಡಿ 200 ಯುವಕರಿಗೆ ಉಚಿತ ಪುಸ್ತಕಗಳನ್ನು ವಿತರಿಸಲಾಯಿತು.

ವಿಜಯಕುಮಾರ ಹಿರೇಮಠ, ಅನಿತಾ ತೋಟಗಂಟಿಮಠ, ಸ್ನೇಹಾ ಹಿರೇಮಠ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಪಂ. ಸಿ.ಕೆ.ಎಚ್. ಶಾಸ್ತ್ರೀ ಕಡಣಿ ಪ್ರಾಸ್ತಾವಿಕವಾಗಿ ಮಾತನಾಡಿ ಸ್ವಾಗತಿಸಿದರು. ಕುಮಾರ ಹಿರೇಮಠ ವಂದಿಸಿದರು.

### ಕಾಯಕವೇ ಕೈಲಾಸದಂತೆ ಪ್ರಾಮಾಣಿಕ ದುಡಿಮೆಯೇ ನಿಜವಾದ ಆರಾಧನೆ

# ಬಾಹ್ಯ ಸೌಲಭ್ಯಗಳ ಬೆನ್ನತ್ತದೆ ಬದುಕಿನ ಮೌಲ್ಯ ಅರಿಯಿರಿ




**ವಿಜಯಸಾಕ್ಷಿ ಸುದ್ದಿ, ಗದಗ**

ಗಳಿಕೆ, ವ್ಯವಹಾರ ಹಾಗೂ ಬಾಹ್ಯ ಸೌಲಭ್ಯಗಳ ಹಿಂದೆ ಓಡುವ ಇಂದಿನ ಬದುಕಿನಲ್ಲಿ ಮನುಷ್ಯ ತನ್ನ ಜೀವನದ ಉದ್ದೇಶ, ಆತ್ಮಸ್ವರೂಪ ಹಾಗೂ ಬದುಕಿನ ಮೌಲ್ಯ ಅರಿತು ಜೀವನ ನಡೆಸಬೇಕು ಎಂದು ಬೆಳ್ಳಟ್ಟಿಯ ರಾಮಲಿಂಗೇಶ್ವರ ದಾಸೋಹಮಠದ ಬಸವರಾಜ ಮಹಾಸ್ವಾಮಿಗಳು ಕರೆ ನೀಡಿದರು.

ನಗರದ ವಿವೇಕಾನಂದ ನಗರದ ಕಾಶೀ ವಿಶ್ವನಾಥ ದೇವಸ್ಥಾನದ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಭವನದಲ್ಲಿ ಶ್ರೀ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿ ಆಯೋಜಿಸಿದ್ದ ಜೀವನ ದರ್ಶನ' 61ನೇ ಉಪನ್ಯಾಸ ಮಾಲಿಕೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಶರೀರವೇ ಜೀವನದ ಸಾಧನವಾಗಿದ್ದು, ಅದರ ಆರೋಗ್ಯ ಕಾಪಾಡಿಕೊಳ್ಳಬೇಕು. ವಯಸ್ಸು ಹೆಚ್ಚಿದಂತೆ ಜ್ಞಾನ, ಅರಿವು ಹಾಗೂ ಆತ್ಮಚಿಂತನೆಯೂ ಹೆಚ್ಚಬೇಕು. ಕಾಯಕವೇ ಕೈಲಾಸ' ಎಂಬ ಶರಣರ ಆಶಯದಂತೆ ಪ್ರಾಮಾಣಿಕವಾಗಿ ದುಡಿಯುವುದೇ ನಿಜವಾದ ಆರಾಧನೆ. ಮಠಮಂದಿರಗಳು ಗಳಿಕೆಯ ಕೇಂದ್ರಗಳಾಗದೆ ಜ್ಞಾನ, ಸೇವೆ, ವೈರಾಗ್ಯ ಹಾಗೂ ಆತ್ಮಚಿಂತನೆಯ ಕೇಂದ್ರಗಳಾಗಬೇಕು ಎಂದರು.

**ವಾಸ್ತು ಎಂದರೆ ಕೇವಲ ದಿಕ್ಕುದೋಷವಲ್ಲ**

ಭಾರತೀಯ ಸಂಪ್ರದಾಯದಲ್ಲಿ ವಾಸ್ತು ಇನ್ ಕರ್ಲ' ಕುರಿತು ನಿವೃತ್ತ ಶಿಕ್ಷಕ ಪದ್ಮರಾಜ ಕುಲಕರ್ಣಿ ಮಾತನಾಡಿ, ವಾಸ್ತು ಎಂದರೆ ಕೇವಲ ಮನೆ ನಿರ್ಮಾಣದ ಅಳತೆ, ದಿಕ್ಕು ಅಥವಾ ದೋಷಪರಿಹಾರವಲ್ಲ. ನೈಸರ್ಗಿಕ ಬೆಳಕು, ಗಾಳಿ, ಸ್ವಚ್ಛತೆ, ಬಣ್ಣ ಹಾಗೂ ಕುಟುಂಬದ ನೆಮ್ಮದಿಯನ್ನು ಒಳಗೊಂಡ ಉತ್ತಮ ಜೀವನಶೈಲಿಯ ಭಾಗವಾಗಿದೆ ಎಂದರು. ಮನೆ ನಿರ್ಮಿಸುವಾಗ ನೈಸರ್ಗಿಕ ಗಾಳಿಬೆಳಕು, ನೀರು ಹಾಗೂ ಅಗ್ನಿಯ ವ್ಯವಸ್ಥೆಗೆ ಆದ್ಯತೆ ನೀಡಬೇಕು. ಒಳಾಂಗಣದ ಬಣ್ಣಗಳ ಆಯ್ಕೆಯೂ ಮನಸ್ಸಿನ ಮೇಲೆ ಪರಿಣಾಮ ಬೀರುವುದರಿಂದ ವಾತಾವರಣಕ್ಕೆ ಹೊಂದುವ ಸೌಮ್ಯ ಬಣ್ಣ ಬಳಸುವುದು ಸೂಕ್ತ ಎಂದರು.

> **ಮನುಷ್ಯನ ಮೌಲ್ಯವನ್ನು ದೇಹದ ರೂಪ, ಸ್ಥಾನಮಾನ ಅಥವಾ ಪದವಿಯಿಂದ ಅಳೆಯಬಾರದು. ಬಿದ್ದವರನ್ನು ಎತ್ತಿಹಿಡಿಯುವುದು, ಸಾಧನೆ ಮಾಡಿದವರನ್ನು ಕಂಡು ಸಂತೋಷಪಡುವುದು ನಮ್ಮ ಸಂಸ್ಕೃತಿಯಾಗಬೇಕು. ಭಕ್ತಿಯನ್ನು ಕೇವಲ ಆಚರಣೆಗೆ ಸೀಮಿತಗೊಳಿಸದೆ ಸಮಾಜ ಹಾಗೂ ಪ್ರಕೃತಿಗೆ ಉಪಕಾರವಾಗುವ ಕಾರ್ಯಗಳಲ್ಲಿ ತೋರಿಸಬೇಕು**
> **- ಬಸವರಾಜ ಮಹಾಸ್ವಾಮಿಗಳು**

**ದಿ. ಡಾ. ಎಸ್. ಜಾನಕಿಗೆ ಸ್ವರನಮನ**

ಕಾರ್ಯಕ್ರಮದಲ್ಲಿ ಇತ್ತೀಚೆಗೆ ಅಗಲಿದ ಹಿರಿಯ ಗಾಯಕಿ ದಿ. ಡಾ. ಎಸ್. ಜಾನಕಿ ಅವರಿಗೆ ವಿವೇಕಾನಂದ ನಗರದ ಗೆಳೆಯರ ಬಳಗದ ಕೆ.ಐ. ಕುರಗೋಡ, ಎಂ.ಎಂ. ಮಂಗಳೂರು, ವೀರೇಶ ಬಡಿಗೇರ, ಜಿ.ಎಸ್. ಸಜ್ಜನರ, ಸಿದ್ದರಾಮ ಪಟ್ಟೇದ ಹಾಗೂ ವಿ.ಬಿ. ಬಣಗಾರ ಅವರಿಂದ ಸ್ವರನಮನ ಸಲ್ಲಿಸಲಾಯಿತು.

ನಿವೃತ್ತ ಪ್ರಾಧ್ಯಾಪಕ ಡಾ. ಕೆ.ಎಸ್. ಪರಡ್ಡಿ ಮಾತನಾಡಿ, ಮೊಬೈಲ್‌ನ ಅತಿಯಾದ ಬಳಕೆ ಕುಟುಂಬ ಜೀವನದ ಮೇಲೂ ಪರಿಣಾಮ ಬೀರುತ್ತಿದ್ದು, ತಾಯಂದಿರು ಹಾಗೂ ಹಿರಿಯರು ಮೊಬೈಲ್ ಬಳಕೆ ಕಡಿಮೆ ಮಾಡಿ ಕುಟುಂಬದೊಂದಿಗೆ ಹೆಚ್ಚು ಸಮಯ ಕಳೆಯಬೇಕು ಎಂದರು.

ಸಮಿತಿ ಅಧ್ಯಕ್ಷ ಎ.ಟಿ. ನರೇಗಲ್ಲ ಅಧ್ಯಕ್ಷತೆ ವಹಿಸಿದ್ದರು. ಉಪಾಧ್ಯಕ್ಷ ಆರ್.ಆರ್. ಕಾಶಪ್ಪನವರ ಉಪಸ್ಥಿತರಿದ್ದರು. ಕಾರ್ಯದರ್ಶಿ ಕೆ.ಪಿ. ಗುಳಗೌಡ್ರ ಸ್ವಾಗತಿಸಿದರು. ಬಿ.ಎಚ್. ಗರಡಿಮನಿ ನಿರೂಪಿಸಿದರು. ಸಂಗೀತಾ ಕುರಿ ವಂದಿಸಿದರು. ಕಾರ್ಯಕ್ರಮದಲ್ಲಿ ಸುದರ್ಶನ ಹಾನಗಲ್ಲ, ಎಸ್.ಎಸ್. ಪಾಳೇಗಾರ, ಆರ್.ಬಿ. ಅಂದಪ್ಪನವರ, ವಿ.ಆರ್. ಗೊಬ್ಬರಗುಂಪಿ, ಸಾಗರ ಬಿಂಗಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಜಕ್ಕಲಿಯಲ್ಲಿ ಇಂದು ಮಧ್ಯರಾತ್ರಿ ಧ್ವಜಾರೋಹಣ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

80ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಸಮೀಪದ ಜಕ್ಕಲಿ ಗ್ರಾಮದಲ್ಲಿ ಶ್ರೀ ಸ್ವಾಮಿ ವಿವೇಕಾನಂದ ಯುವಸೇವಾ ಸಂಘದ ವತಿಯಿಂದ ಆ.14ರಂದು ಮಧ್ಯರಾತ್ರಿ 12 ಗಂಟೆಗೆ ಧ್ವಜಾರೋಹಣ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಸಂಘದ ಅಧ್ಯಕ್ಷ ಮಿಥುನ್ ಗಾಣಿಗೇರ ತಿಳಿಸಿದರು.

ನರೇಗಲ್ಲ ಹಿರೇಮಠದ ಸಭಾಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಕೊಪ್ಪಳ ಜಿಲ್ಲೆಯ ಕುಣಿಕೇರಿ ಗ್ರಾಮದ ಸಮಾಜಸೇವಕಿ ಹಾಗೂ ದಾನಿ ಹುಚ್ಚಮ್ಮ ಚೌದ್ರಿ ಪಾಲ್ಗೊಳ್ಳಲಿದ್ದಾರೆ. ಮಕ್ಕಳ ಶಿಕ್ಷಣಕ್ಕಾಗಿ ಸರ್ಕಾರಿ ಶಾಲೆ ನಿರ್ಮಿಸಲು ತಮ್ಮ ಎರಡು ಎಕರೆ ಜಮೀನು ದಾನ ಮಾಡಿರುವ ಅವರ ನಿಸ್ವಾರ್ಥ ಸೇವೆಯನ್ನು ಗೌರವಿಸುವ ಉದ್ದೇಶದಿಂದ ಆಹ್ವಾನಿಸಲಾಗಿದೆ ಎಂದರು.

ಹುಚ್ಚಮ್ಮ ಚೌದ್ರಿ ಅವರು ತಮ್ಮೂರಿನ ಮಕ್ಕಳು ಉತ್ತಮ ಶಿಕ್ಷಣ ಪಡೆಯಬೇಕು ಎಂಬ ಆಶಯದಿಂದ ಯಾವುದೇ ಪ್ರತಿಫಲಾಪೇಕ್ಷೆಯಿಲ್ಲದೆ ಕೋಟ್ಯಂತರ ರೂಪಾಯಿ ಮೌಲ್ಯದ ಎರಡು ಎಕರೆ ಜಮೀನನ್ನು ಸರ್ಕಾರಿ ಶಾಲೆ ನಿರ್ಮಾಣಕ್ಕೆ ನೀಡಿದ್ದಾರೆ. ಹಲವು ವರ್ಷ ಇದೇ ಶಾಲೆಯಲ್ಲಿ ಬಿಸಿಯೂಟದ ಅಡುಗೆ ಕೆಲಸ ಮಾಡಿದ್ದ ಅವರು, ಇಂದಿಗೂ ಸರಳ ಜೀವನ ನಡೆಸುತ್ತ ಕೂಲಿ ಕೆಲಸ ಮಾಡುತ್ತಿದ್ದಾರೆ. ಅವರ ಸೇವೆಯನ್ನು ಗುರುತಿಸಿ ಕರ್ನಾಟಕ ಸರ್ಕಾರ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಿದೆ.

ಆ.14ರಂದು ಸಂಜೆ 6ರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದ್ದು, ಮಧ್ಯರಾತ್ರಿ 12ಕ್ಕೆ ಧ್ವಜಾರೋಹಣ ನೆರವೇರಲಿದೆ. ಇದೇ ವೇಳೆ ಅಮೋಘ ಭಾರತ, ಪ್ರಥಿಕ್ ಕುಂದಗೋಳ, ಮಾಜಿ ಸೈನಿಕರಾದ ಮಲ್ಲಪ್ಪ ಮುಗಳಿ, ಬಸವರಾಜ ಕೋರಿ, ಮಹೇಶ್ವರಯ್ಯ ಹಿರೇಮಠ, ಯುವ ಸಾಧಕಿಯರಾದ ಪ್ರೀತಿ ಬುಳ್ಳಾ ಹಾಗೂ ಸೃಷ್ಟಿ ಮೇಟಿ ಅವರನ್ನು ಸನ್ಮಾನಿಸಲಾಗುವುದು.

ಗ್ರಾಮದ ಮಕ್ಕಳು, ಯುವಕರು, ಮಹಿಳೆಯರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಮಿಥುನ ಗಾಣಿಗೇರ ಮನವಿ ಮಾಡಿದರು.

# ಆ.15ರಿಂದ ಶಿರಹಟ್ಟಿ ತಾಲೂಕಿನಲ್ಲಿ ಜಾಬ್ ಕಾರ್ಡ್ ಮೇಳ

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಗ್ರಾಮೀಣ ಪ್ರದೇಶದ ಅರ್ಹ ಕುಟುಂಬಗಳಿಗೆ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ವಿಕಸಿತ ಭಾರತ G RAM G ಯೋಜನೆಯಡಿ ಆ.15ರಿಂದ ಶಿರಹಟ್ಟಿ ತಾಲೂಕಿನ ಎಲ್ಲ ಗ್ರಾಮ ಪಂಚಾಯಿತಿಗಳಲ್ಲಿ ಜಾಬ್ ಕಾರ್ಡ್ ಮೇಳ ಹಾಗೂ ವಿಶೇಷ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗುತ್ತಿದೆ ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ರಾಮಣ್ಣ ದೊಡ್ಡಮನಿ ತಿಳಿಸಿದ್ದಾರೆ. ಉದ್ಯೋಗ ಬಯಸುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಅಲ್ಪಸಂಖ್ಯಾತರು, ವಿಶೇಷ ಚೇತನರು, ಮಹಿಳಾ ನೇತೃತ್ವದ ಕುಟುಂಬಗಳು, ಭೂರಹಿತ ಕೂಲಿ ಕಾರ್ಮಿಕರು ಸೇರಿದಂತೆ ಅರ್ಹ ಗ್ರಾಮೀಣ ಕುಟುಂಬಗಳಿಗೆ ತ್ವರಿತವಾಗಿ




ಜಾಬ್ ಕಾರ್ಡ್ ಒದಗಿಸುವುದು ಅಭಿಯಾನದ ಉದ್ದೇಶವಾಗಿದೆ. ಈ ಮೂಲಕ ಹೆಚ್ಚಿನ ಸಂಖ್ಯೆಯಲ್ಲಿ ಮಾನವ ದಿನಗಳ ಸೃಷ್ಟಿಗೂ ಆದ್ಯತೆ ನೀಡಲಾಗುತ್ತಿದೆ ಎಂದರು.

**ಜಾಬ್ ಕಾರ್ಡ್, ಇ-ಕೆವೈಸಿಗೆ ಆದ್ಯತೆ:** ಈಗಾಗಲೇ ಜಾಬ್ ಕಾರ್ಡ್ ಹೊಂದಿರುವ ಕುಟುಂಬಗಳ ಮಾಹಿತಿಯನ್ನು ಪರಿಶೀಲಿಸುವುದು, ಅಗತ್ಯವಿರುವವರಿಗೆ ಹೊಸ ಜಾಬ್ ಕಾರ್ಡ್ ನೀಡುವುದು, ನವೀಕರಣ, ಛಿ-ಓ್ಗಇ ಪೂರ್ಣಗೊಳಿಸುವುದು ಹಾಗೂ ಉದ್ಯೋಗದ ಬೇಡಿಕೆ ಸ್ವೀಕರಿಸುವ ಕಾರ್ಯ ನಡೆಯಲಿದೆ. ಉದ್ಯೋಗಕ್ಕೆ ಅರ್ಜಿ ಸಲ್ಲಿಸುವ ಕುಟುಂಬಗಳಿಗೆ ನಿಯಮಾನುಸಾರ ಸ್ವೀಕೃತಿ ನೀಡಲು ಗ್ರಾಮ ಪಂಚಾಯಿತಿಗಳಲ್ಲಿ ವ್ಯವಸ್ಥೆ ಮಾಡಲಾಗುತ್ತಿದೆ.

ಮನೆಮನೆ ಭೇಟಿ, ಗ್ರಾಮಸಭೆ, ಪೋಸ್ಟರ್ ಹಾಗೂ ಬ್ಯಾನರ್‌ಗಳ ಮೂಲಕ ಯೋಜನೆಯ ಕುರಿತು ಜಾಗೃತಿ ಮೂಡಿಸಲಾಗುವುದು. ಗ್ರಾಮೀಣ ಜನರು ಅಗತ್ಯ ದಾಖಲೆಗಳೊಂದಿಗೆ ತಮ್ಮ ಗ್ರಾಮ ಪಂಚಾಯಿತಿಯನ್ನು ಸಂಪರ್ಕಿಸಿ ಯೋಜನೆಯ ಸದುಪಯೋಗ ಪಡೆಯಬೇಕು ಎಂದು ಅವರು ಮನವಿ ಮಾಡಿದ್ದಾರೆ.

> **ಉದ್ಯೋಗದ ಅವಕಾಶವನ್ನು ಅರ್ಹ ಕುಟುಂಬಗಳ ಮನೆಬಾಗಿಲಿಗೆ ತಲುಪಿಸುವುದು ನಮ್ಮ ಮುಖ್ಯ ಉದ್ದೇಶ. ಜಾಬ್ ಕಾರ್ಡ್, e&KYC ಹಾಗೂ ಉದ್ಯೋಗದ ಬೇಡಿಕೆ ಸಲ್ಲಿಕೆ ಕುರಿತು ಮಾಹಿತಿ ಅಗತ್ಯವಿದ್ದರೆ ಸಾರ್ವಜನಿಕರು ತಮ್ಮ ಗ್ರಾಮ ಪಂಚಾಯಿತಿಯನ್ನು ಸಂಪರ್ಕಿಸಬೇಕು. ಯೋಜನೆಯ ಅನುಷ್ಠಾನದಲ್ಲಿ ಜನರ ಸಹಕಾರ ಅತ್ಯಂತ ಮುಖ್ಯ.**
> **- ರಾಮಣ್ಣ ದೊಡ್ಡಮನಿ,** ಇಒ, ತಾಪಂ ಶಿರಹಟ್ಟಿ

ಕರ್ನಾಟಕ ಸರಕಾರ (ಜಿಲ್ಲಾ ಪಂಚಾಯತ್, ಗದಗ)
**ಕಾರ್ಯನಿರ್ವಾಹಕ ಇಂಜಿನೀಯರ,**
**ಪಂಚಾಯತ್ ರಾಜ್ ಇಂಜಿನೀಯರಿಂಗ್ ವಿಭಾಗ, ಗದಗ.**
ನಂ:ಪಂ.ರಾಜ್.ಇಂ.ವಿ/ಗದಗ/ಪಿಬಿ.3/ಟೆಂಡರ/2026-27/1270
ದಿನಾಂಕ : 13-08-2026

**ಕೆಪಿಪಿ ಪೋರ್ಟಲ್ ಟೆಂಡರ ಪ್ರಕಟಣೆ**
**Standard Bid Document KW-1, KW-2,**

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್-2000 ನಿಯಮದಂತೆ Standard Bid Document KW-1,KW-2, ರ ನಿಯಮಗಳನ್ವಯ ಅರ್ಹ ಗುತ್ತೇದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮುಖಾಂತರ 3 ಕಾಮಗಾರಿಗಳ ಟೆಂಡರನ್ನು ಆಹ್ವಾನಿಸಲಾಗಿದೆ. ಲೆಕ್ಕ ಶೀರ್ಷಿಕೆ : 2025-26 ನೇ ಸಾಲಿನ ಮಾನ್ಯ ಮುಖ್ಯಮಂತ್ರಿಗಳ ಮೂಲಸೌಕರ್ಯ ಅಭಿವೃದ್ಧಿ ಯೋಜನೆಯಡಿ, ಟೆಂಡರನ್ನು ಆಹ್ವಾನಿಸಲಾಗಿದೆ. ಪಿ.ಡಬ್ಲ್ಯು.ಡಿ. ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, (https://kppp.karnataka.gov.in) ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ ಇಂಡೆಂಟ್ ಸಂಖ್ಯೆ ಈ ಕೆಳಗಿನಂತೆ ಇರುತ್ತವೆ.

**WORK_INDENT : 25786/CALL-2, 26045/CALL-2, 26037/CALL-2,**

ಟೆಂಡರಿಗಿಟ್ಟ ಕನಿಷ್ಠ ಮೊತ್ತ ರೂ. **16.77** ಲಕ್ಷ ಮತ್ತು ಗರಿಷ್ಠ ಮೊತ್ತ ರೂ. **25.15** ಲಕ್ಷಗಳು ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ : ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಇ.ಎಂ.ಡಿ. ಸಂಬಂಧಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಇ-ಪ್ರೋಕ್ಯೂರಮೆಂಟ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್-ಬಿ ಯನ್ನು ವೆಬ್‌ಸೈಟಿನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ : **14-08-2026** ರಿಂದ **21-08-2026** ರಂದು 16.00 ಗಂಟೆಯವರೆಗೆ. ಟೆಂಡರ ತೆರೆಯುವ ದಿನಾಂಕ : **24-08-2026** ರಂದು 16.30 ಗಂಟೆಗೆ ತೆರೆಯಲಾಗುವುದು. ಟೆಂಡರನ್ನು ಅನಾವರಣಗೊಳಿಸಿದ ದಿನಾಂಕದಿಂದ ಭಾಗವಹಿಸಿದ ಗುತ್ತಿಗೆದಾರರಲ್ಲಿ ಆರ್ಥಿಕ ಬಿಡ್‌ದಲ್ಲಿ ಅರ್ಹ ಗುತ್ತಿಗೆದಾರರು ಈ ಕಾರ್ಯಾಲಯಕ್ಕೆ ಹಾಜರಾಗಿ ವ್ಯತ್ಯಾಸದ ಮೊತ್ತ ಹಾಗೂ ಪಿ.ಎಸ್.ಡಿ. ಮೊತ್ತವನ್ನು ಎಫ್.ಡಿ.ಆರ್ ರೂಪದಲ್ಲಿ 20 ದಿನಗಳ ಒಳಗಾಗಿ (ಷರತ್ತು ಕ್ರ.ಸಂ :13 ರಂತೆ) ಭರಣಾ ಮಾಡಬೇಕು. ಇ-ಪದ್ಧತಿ ಇರುವುದರಿಂದ ಕಾಗದ ರಹಿತವಾಗಿದ್ದು ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶ ಇರುವುದಿಲ್ಲ. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

**ಸಹಿ/- ಕಾರ್ಯನಿರ್ವಾಹಕ ಇಂಜಿನೀಯರರು,**
**ಪಂ.ರಾಜ್. ಇಂಜಿನೀಯರಿಂಗ್ ವಿಭಾಗ,**
ವಾಸಾಸಂಇ/ಗದಗ/203/ಕೆಎಸ್‌ಎಂಸಿಎ/2026-27 **ಗದಗ**

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka